ಸಂಪುಟ : 9 ಸಂಚಿಕೆ 172 ಪುಟ : 4 ಬೆಲೆ: 3.00 ಬುಧವಾರ ಆಗಸ್ಟ್ 14 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 172 Pages : 4 Price : 3.00 Wednesday August 14 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಆಗಸ್ಟ್ 14ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 21 ವಿಜಯನಗರ ಶಾಲೆಯ ಭಾಗಗಳು, ಟವರ್ ಕಂಬ, ಕಮತರ ಪ್ಲಾಟ್, ಕರುಗಲ್ಲ ಲೇಔಟ್, ಶಿಗ್ಗಾವಿ ಲೇಔಟ್, ಹನುಮಂತ ದೇವರ ಗುಡಿ ಲೈನ್, ಗಾರ್ಡನ್ ಸುತ್ತಮುತ್ತಲಿನ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 16, 21 ಕುಷ್ಟರೋಗ ಕಾಲೋನಿ, ಗುಡದೂರ ಸ್ವಾಮಿ ಮಠ, ಅಬ್ಬಿಗೇರಿ ಲೈನ್, ಸುಣ್ಣದ ಭಟ್ಟಿ 2 ಭಾಗಗಳು, ಕುಂಬೇಶ್ವರ ನಗರ 2 ಭಾಗಗಳು, ರಹಮತ್ ನಗರ 4 ಭಾಗಗಳು, ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 29 ಚಂದಾವರಿಯವರ ಲೈನ್, ನೆಲ್ಸನ ಮಂಡೇಲಾ ಲೈನ್, ಪಾಪಡೆ ಲೈನ್, ಹೊಸ ಹುಡ್ಕೋ ಲೈನ್. ವಾರ್ಡ್ ನಂ. 6, 7, 5 ಶಿವಾಜಿನಗರ, ತಟ್ಟಿಯವರ ಲೈನ್, ಪಣಿಭಂದ, ರಂಗಪ್ಪಜ್ಜನ ಮಠದ ಲೈನ್, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 2 ಹರಣಶಿಕಾರಿ ಓಣಿ, ಸೆಟ್ಲಮೆಂಟ್ ಹನುಮಂತ ದೇವರ ಗುಡಿ ಲೈನ್, ಗಾಂಧಿ ನಗರ, ಸ್ಲಾಬ್ ಮನೆ, ವೆಲ್ಲೇರ್ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ (ಸಾಮಾನ್ಯ ಪದವಿ ಕೋರ್ಸಿನ ವಿದ್ಯಾರ್ಥಿಗಳಿಗೆ ಮಾತ್ರ ) ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2 ಎ, 2 ಬಿ, 3 ಎ , 3 ಬಿ ಮತ್ತು ಪ.ಜಾ/ ಪ.ವರ್ಗ ಸೇರಿದ ವಿದ್ಯಾರ್ಥಿಗಳಿಂದ ಆನ್‌ಲೈನ್ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 4 ಕೊನೆಯ ದಿನವಾಗಿದೆ. ತಾಲೂಕಾವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್ ಸೈಟ್ https://bcwd.karnataka.gov.in ನಲ್ಲಿ ನೋಡಬಹುದು. ಹೆಚ್ಚಿನ ಮಾಹಿತಿಗಾಗಿ 8050770004 ಮತ್ತು 8050770005 ಸಂಪರ್ಕಿಸಬಹುದಾಗಿದೆ.

## ಶ್ರೀ ಮಲ್ಲಿಕಾರ್ಜುನ ರಥೋತ್ಸವ ಆ.26ಕ್ಕೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಅಕ್ಕಿಗುಂದ ಗ್ರಾಮದ ಗುಡ್ಡದ ಶ್ರೀಮಲ್ಲಿಕಾರ್ಜುನ ಸ್ವಾಮಿಯ ರಥೋತ್ಸವವು ಶ್ರಾವಣ ಸೋಮವಾರ ಆ.26ರಂದು ಜರುಗಲಿದೆ. ಶ್ರೀಮಲ್ಲಿಕಾರ್ಜುನ ಸ್ವಾಮಿ ಹಾಗೂ ಭ್ರಮರಾಂಭ ದೇವಿಯ ರಥೋತ್ಸವವು ಆ.26ರಂದು ಸೋಮವಾರ ಸಂಜೆ 5ಕ್ಕೆ ಜರುಗುವುದು. ಕ್ಯಾಲೆಂಡರ್‌ಗಳಲ್ಲಿ ರಥೋತ್ಸವವು ಆ.19ರಂದು ಸೋಮವಾರ ಜರುಗಲಿದೆ ಎಂದು ತಪ್ಪಾಗಿ ಪ್ರಕಟವಾಗಿದ್ದು, ಭಕ್ತರು ಗಮನಿಸಬೇಕು ಎಂದು ಭಕ್ತ ಮಂಡಳಿಯ ಪ್ರಕಟಣೆ ತಿಳಿಸಿದೆ.

### 'ವಿಶ್ವ ಅಂಗಾಂಗ ದಾನ' ದಿನದ ಕಾಲ್ನಡಿಗೆ, ಸೈಕಲ್ ಜಾಥಾದಲ್ಲಿ ಸಚಿವ ಎಚ್.ಕೆ. ಪಾಟೀಲ

# ಅಂಗಾಂಗ ದಾನದ ಜಾಗೃತಿ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ದಾನಗಳಲ್ಲಿಯೇ ಅಂಗಾಂಗ ದಾನ ಅತ್ಯಂತ ಪವಿತ್ರವಾದದ್ದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಐಎಂಎ, ಜಿಮ್ಸ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಲಯನ್ಸ್ ಕ್ಲಬ್ ಹಾಗೂ ನಗರದ ವಿವಿಧ ಆಸ್ಪತ್ರೆಗಳ ಸಹಯೋಗದಲ್ಲಿ ವಿಶ್ವ ಅಂಗಾಂಗ ದಿನಾಚರಣೆ ನಿಮಿತ್ತ ಕಾಲ್ನಡಿಗೆ ಹಾಗೂ ಸೈಕಲ್ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಗದಗ-ಬೆಟಗೇರಿ ಅವಳಿ ನಗರದಲ್ಲಿ ವೈದ್ಯರೆಲ್ಲರೂ ಕೂಡಿ ವಿಶ್ವ ಅಂಗದಾನ ದಿನ ಆಚರಿಸುವ ಮೂಲಕ ಜಾಗೃತಿ ಮೂಡಿಸುತ್ತಿರುವುದು ಸಂತಸದ ವಿಷಯ. ಅಂಗಾಂಗ ದಾನ ವಿಷಯದ ಕುರಿತು ಉದಾತ್ತ ಉದ್ದೇಶವನ್ನಿಟ್ಟುಕೊಂಡು ಮಾಡುತ್ತಿರುವ ನಿಮ್ಮ ಪರಿಶ್ರಮ ಯಶಸ್ವಿಯಾಗಲಿ ಎಂದು ಹಾರೈಸಿದರು.





ಜಿಲ್ಲೆ, ರಾಜ್ಯ ಸೇರಿ ದೇಶದಲ್ಲಿ ಅಂಗಾಂಗಗಳ ಅಗತ್ಯ ಇದ್ದೇ ಇದೆ. ನಮ್ಮೆಲ್ಲರಿಗೂ ತಿಳಿದಿರುವ ಹಾಗೆ ಕಳೆದ 25 ವರ್ಷಗಳ ಹಿಂದೆ ರಕ್ತದಾನಕ್ಕೂ ಕೊರತೆಯಾಗುವಂತಹ ಪರಿಸ್ಥಿತಿ ಇತ್ತು. ಸದ್ಯ ಜನರು ಜಾಗೃತರಾಗಿದ್ದು, ಇಂದು ರಕ್ತದಾನ ಶಿಬಿರ ಸೇರಿ ರಕ್ತ ಭಂಡಾರಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ರಕ್ತದಾನ ಮಾಡುತ್ತಿದ್ದಾರೆ ಎಂದರು.

ಕಾಲ್ನಡಿಗೆ ಜಾಥಾಕ್ಕೆ ಚಾಲನೆ ನೀಡಿದ ಸಚಿವರು ವೈದ್ಯರು ಹಾಗೂ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳೊಂದಿಗೆ ಕಾಲ್ನಡಿಗೆಯಲ್ಲಿ ಪಾಲ್ಗೊಂಡರು.

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಡಿಎಚ್‌ಒ ಡಾ. ಎಸ್. ಎಸ್. ನೀಲಗುಂದ, ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಡಾ. ಅವಿನಾಶ ಓದುಗೌಡರ ಸೇರಿ ನಗರದ ಎಲ್ಲ ಸರಕಾರಿ ಹಾಗೂ ಖಾಸಗಿ ಆಸ್ಪತ್ರೆಗಳ ವೈದ್ಯರು, ಅವಳಿ ನಗರದ ಶಾಲಾ-ಕಾಲೇಜಿನ ವಿದ್ಯಾರ್ಥಿಗಳು ಜಾಥಾದಲ್ಲಿ ಪಾಲ್ಗೊಂಡಿದ್ದರು.

> ರಕ್ತದಾನದ ಹಾಗೆಯೇ ಅಂಗಾಂಗ ದಾನ ಅತ್ಯಂತ ಪವಿತ್ರ ದಾನಗಳಲ್ಲೊಂದಾಗಿದೆ. ಅದನ್ನು ಜಾಗೃತಿಗೊಳಿಸಲು ಯುವಕರನ್ನು ಒಟ್ಟುಗೂಡಿಸಿರುವುದು ಸಂತಸದ ವಿಷಯ. ಇಲ್ಲಿ ಸೇರಿರುವ ಎಲ್ಲರೂ ಅಂಗಾಂಗ ದಾನದ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಿ, ಅಂಗಾಂಗ ವೈಫಲ್ಯದಿಂದ ಬಳಲುತ್ತಿರುವವರಿಗೆ ಅಂಗಾಂಗ ಜೋಡಣೆಗೆ ಅನುಕೂಲವಾಗುವಂತೆ ಅಂಗಾಂಗ ದಾನಕ್ಕೆ ಪ್ರೇರೇಪಿಸುವ ಕೆಲಸವಾಗಬೇಕು ಎಂದು ಸಚಿವ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

### ಪುರಸಭೆ ಅಧ್ಯಕ್ಷ ಸ್ಥಾನಕ್ಕೇರಲು ಏರ್ಪಟ್ಟ ಪೈಪೋಟಿ | ಅವಕಾಶದ ನಿರೀಕ್ಷೆಯಲ್ಲಿ ಆಕಾಂಕ್ಷಿಗಳು

# ಯಾರ ಕೊರಳಿಗೆ ವಿಜಯದ ಮಾಲೆ?

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪಟ್ಟಣದ ಪುರಸಭೆ ಅಧ್ಯಕ್ಷ ಸ್ಥಾನಕ್ಕೆ ಸಾಮಾನ್ಯ, ಉಪಾಧ್ಯಕ್ಷ ಸ್ಥಾನಕ್ಕೆ ಸಾಮಾನ್ಯ ಮಹಿಳೆ ಮೀಸಲು ಪ್ರಕಟವಾಗಿದ್ದು, ಕೊನೆಯ 14 ತಿಂಗಳ ಅವಧಿಗೆ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೇರಲು ಬಿಜೆಪಿಯ ಸುಭಾಸ ಮ್ಯಾಗೇರಿ, ಸುಜಾತಾ ಶಿಂಗ್ರಿ ಹಾಗೂ ಯಮನೂರ ತಿರಕೋಜಿ ನಡುವೆ ಪೈಪೋಟಿ ಏರ್ಪಟ್ಟಿದೆ.

ಪಟ್ಟಣದ ಪುರಸಭೆಗೆ 23 ಸ್ಥಾನಗಳಿದ್ದು, 18 ಬಿಜೆಪಿ ಹಾಗೂ 5 ಕಾಂಗ್ರೆಸ್ ಸದಸ್ಯರು ಆಯ್ಕೆಯಾಗಿದ್ದಾರೆ. ಬಿಜೆಪಿ ಮೊದಲ ಹಂತದ ಅಧಿಕಾರ ಅವಧಿಗೆ ವೀರಪ್ಪ ಪಟ್ಟಣಶೆಟ್ಟಿ ಅಧ್ಯಕ್ಷರಾಗಿ, ಲೀಲಾವತಿ ವನ್ನಾಲ ಉಪಾಧ್ಯಕ್ಷೆಯಾಗಿ ಆಯ್ಕೆಯಾಗಿದ್ದರು. ಹೀಗಾಗಿ ಪುರಸಭೆ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನದ ಮೇಲೆ ಆಕಾಂಕ್ಷಿಗಳಾಗಿದ್ದ ಕೆಲ ಸದಸ್ಯರಿಗೆ ನಿರಾಸೆಯಾಗಿತ್ತು. ಹೀಗಾಗಿ ಪುರಸಭೆ ಅಧ್ಯಕ್ಷ ಸ್ಥಾನಕ್ಕೇರಲು ಹಿರಿಯ ರಾಜಕಾರಣಿಗಳು, ಸಮಾಜದ ಮುಖಂಡರ ಮೂಲಕ ಹೈಕಮಾಂಡ್ ಮೇಲೆ ಒತ್ತಡ ಹೇರಲು ಮುಂದಾಗಿದ್ದಾರೆ ಎನ್ನಲಾಗುತ್ತಿದೆ. ಆದರೆ ಬಿಜೆಪಿ ಹೈಕಮಾಂಡ್ ಯಾರನ್ನು ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ಆಯ್ಕೆ ಮಾಡಲಿದೆ ಎನ್ನುವತ್ತ ಎಲ್ಲರ ಚಿತ್ತ ನೆಟ್ಟಿದೆ.



> ಪಟ್ಟಣದ ಅಭಿವೃದ್ಧಿ ಪೂರಕವಾಗಿ ಕೆಲಸವಾಗಬೇಕು. ಪುರಸಭೆ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ಅವರಲ್ಲಿಯೇ ಕಚ್ಚಾಟ ನಡೆದಿದೆ. ಶಾಸಕರು ಅಭಿವೃದ್ಧಿಪೂರಕವಾಗಿದ್ದು, ಪುರಸಭೆ ಅಧ್ಯಕ್ಷರಾಗಿ ಆಯ್ಕೆ ಆಗುವವರು ಸಹ ಸಮರ್ಥವಾಗಿ ಪಟ್ಟಣದ ಅಭಿವೃದ್ಧಿಗೆ ಶ್ರಮಿಸಲಿ ಎನ್ನುವ ಆಶಯ ಹೊಂದಿದ್ದೇವೆ ಹೊರತು ಇತರ ಉದ್ದೇಶಗಳಿಲ್ಲ.
>
> – ಶಿವರಾಜ ಘೋರ್ಪಡೆ.
> ವಿಪಕ್ಷ ಸದಸ್ಯ.

▶▶3ನೇ ಪುಟಕ್ಕೆ

### ಪತ್ರಕರ್ತರ 'ಕಪ್ಪತ್ತಗುಡ್ಡ ಅಧ್ಯಯನ ಪ್ರವಾಸ'ದ ಸಂದರ್ಭದಲ್ಲಿ ಡಾ.ತೋಂಟದ ಸಿದ್ದರಾಮ ಶ್ರೀಗಳು

# ಕಪ್ಪತ್ತಗುಡ್ಡ ಯಥಾಸ್ಥಿತಿಯಲ್ಲಿ ಉಳಿದರೆ ಮಾತ್ರ ನಾಡು ಸಮೃದ್ಧ

■ವಿಜಯಸಾಕ್ಷಿ ಸುದ್ದಿ, ಗದಗ

ಮಧ್ಯ ಕರ್ನಾಟಕದ ಜೀವನಾಡಿಯಾಗಿರುವ ಕಪ್ಪತ್ತಗುಡ್ಡದ ಸುತ್ತಲಿನ ಸೂಕ್ಷ್ಮ ವಲಯವನ್ನು 10 ಕಿ.ಮೀದಿಂದ ಒಂದು ಕಿ.ಮೀಗೆ ಇಳಿಸಿದ್ದು ಆತಂಕಕಾರಿ ವಿಷಯವಾಗಿದೆ. ಈ ಕುರಿತು ಮುಖ್ಯಮಂತ್ರಿಗಳು ಪುನರ್ ಪರಿಶೀಲನೆ ಮಾಡಬೇಕು ಎಂದು ಗದುಗಿನ ತೋಂಟದಾರ್ಯ ಮಠದ ಜಗದ್ಗುರು ಡಾ.ತೋಂಟದ ಸಿದ್ದರಾಮ ಮಹಾಸ್ವಾಮೀಜಿ ಆಗ್ರಹಿಸಿದರು.

ಅವರು ಕರ್ನಾಟಕ ಪತ್ರಕರ್ತರ ಸಂಘ ಮತ್ತು ತೋಂಟದಾರ್ಯ ಮಠದ ಸಂಯುಕ್ತ ಆಶ್ರಯದಲ್ಲಿ ಕಪ್ಪತ್ತಗುಡ್ಡದಲ್ಲಿ ಏರ್ಪಡಿಸಲಾಗಿದ್ದ 16 ಜಿಲ್ಲೆಗಳ 76 ಪತ್ರಕರ್ತರ 'ಕಪ್ಪತ್ತಗುಡ್ಡ ಅಧ್ಯಯನ ಪ್ರವಾಸ'ದ ನಂತರ ನಿಯೋಗವನ್ನು ಉದ್ದೇಶಿಸಿ ಮಾತನಾಡುತ್ತಿದ್ದರು.

ಕಳೆದ ಬಾರಿ ಸಿದ್ದರಾಮಯ್ಯನವರು ಮುಖ್ಯಮಂತ್ರಿ ಆಗಿದ್ದ ಸಂದರ್ಭದಲ್ಲಿ ಕಪ್ಪತ್ತಗುಡ್ಡದ ಸಂರಕ್ಷಣೆಗಾಗಿ ಹಲವಾರು ಉತ್ತಮವಾದ ಕ್ರಮಗಳನ್ನು ಕೈಗೊಂಡಿದ್ದರು. ಕಪ್ಪತ್ತಗುಡ್ಡವನ್ನು ಸಂರಕ್ಷಿತ ವಲಯವನ್ನಾಗಿ ಘೋಷಿಸುವಂತೆ ನಾವು ಮಾಡಿಕೊಂಡಿದ್ದ ಮನವಿಗೆ ಅರಣ್ಯ ಸಚಿವರಾಗಿದ್ದ ಸತೀಶ ಜಾರಕಿಹೊಳಿಯವರು ತಕ್ಷಣ ಸ್ಪಂದಿಸಿ ಒಂದು ಹೆಜ್ಜೆ ಮುಂದೆ ಹೋಗಿ ಕಪ್ಪತ್ತಗುಡ್ಡವನ್ನು ವನ್ಯಜೀವಿಧಾಮವನ್ನಾಗಿ ಘೋಷಿಸಿದ್ದರು. ಈ ಇಬ್ಬರ ವಿಶೇಷ ಕಾಳಜಿಯಿಂದಾಗಿ ಕಪ್ಪತ್ತಗುಡ್ಡಕ್ಕೆ ಅನುಕೂಲವಾಗಿತ್ತು. ಈಗ 10 ಕಿ.ಮೀ. ವರೆಗೆ ಇದ್ದ ಸೂಕ್ಷ್ಮ ವಲಯವನ್ನು ಒಂದು ಕಿಲೋಮೀಟರ್‌ಗೆ ಇಳಿಸಿದ್ದು ಮಾತ್ರ ಆತಂಕದ ಬೆಳವಣಿಗೆ ಎಂದು ಶ್ರೀಗಳು ಅಭಿಪ್ರಾಯಪಟ್ಟರು.

ಸಿದ್ದು ಸತ್ಯಣ್ಣವರ್ ಮಾತನಾಡಿ, 150 ವರ್ಷಗಳಿಂದ ಗುಡ್ಡವು ಸಾಕಷ್ಟು ಪಲ್ಲಟಗಳನ್ನು ಕಂಡಿದೆ. ಪರಿಸರದ ಉಳಿವಿಗಾಗಿ ಅರಣ್ಯ ಇಲಾಖೆ ವಿಶೇಷ ಕಾಳಜಿ ವಹಿಸಿದೆ. ಹೆಚ್ಚಿನ ಪ್ರಮಾಣದ ಕಾವಲುಗಾರರನ್ನು ನೇಮಿಸಿದೆ. ಆಯುರ್ವೇದ ಸಸ್ಯಗಳ ಸಂರಕ್ಷಣೆಗೆ ಹತ್ತು ಹಲವು ಕ್ರಮಗಳನ್ನು ಕೈಗೊಂಡಿದ್ದು ಸ್ವಾಗತಾರ್ಹವಾಗಿದೆ ಎಂದರು.



ಕರ್ನಾಟಕ ಪತ್ರಕರ್ತರ ಸಂಘದ ಅಧ್ಯಕ್ಷ ಮುರುಗೇಶ್ ಶಿವಪೂಜಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಪ್ರತಿನಿಧಿಗಳನ್ನು ಸ್ವಾಗತಿಸಿದರು. ಜಿಲ್ಲಾ ಖಜಾನೆ ಇಲಾಖೆ ಉಪನಿರ್ದೇಶಕ ಹರಿನಾಥ ಬಾಬು ಮಾತನಾಡಿ, ಈ ಗುಡ್ಡದಲ್ಲಿ ಎಲ್ಲವೂ ಇದೆ.ಅದನ್ನು ಕಂಡುಕೊಳ್ಳುವ ದೃಷ್ಟಿ ಬೇಕಿದೆ. ಇಲ್ಲಿನ ಗಿಡಮರಗಳು ಆಡುವ ಪಿಸುಮಾತುಗಳನ್ನು ಕೇಳಿಸಿಕೊಳ್ಳುವ ಮನೋಭಾವವನ್ನು ಬೆಳೆಸಿಕೊಳ್ಳಬೇಕಿದೆ ಎಂದರು.

> ಕಪ್ಪತ್ತಗುಡ್ಡ ಯಥಾಸ್ಥಿತಿಯಲ್ಲಿ ಉಳಿದು ಸಮೃದ್ಧವಾದರೆ ಮಾತ್ರ ಮಧ್ಯ ಕರ್ನಾಟಕದಲ್ಲಿ ಮಳೆ-ಬೆಳೆ ಬಂದು ಈ ನಾಡು ಸಮೃದ್ಧವಾಗಿರುತ್ತದೆ. ಮಧ್ಯ ಕರ್ನಾಟಕದ ರೈತರು ಮತ್ತು ಕಪ್ಪತ್ತಗುಡ್ಡದಲ್ಲಿಯೇ ಆಶ್ರೀತವಾಗಿರುವ ಜನಾಂಗ, ತಾಂಡಾಗಳು, ಹಳ್ಳಿಗಳು ಅಲ್ಲಿನ ಪರಿಸರ ಹೈನೋದ್ಯಮ ಎಲ್ಲವೂ ಉಳಿಯುತ್ತದೆ. ಇಲ್ಲವಾದಲ್ಲಿ ಎಲ್ಲವೂ ನಾಶವಾಗಿ ಹೋಗಲಿದೆ. ಇದಕ್ಕೆ ಅವಕಾಶ ನೀಡಬಾರದು.
>
> – ಡಾ.ತೋಂಟದ ಸಿದ್ದರಾಮ ಶ್ರೀಗಳು.

ಅರಣ್ಯಾಧಿಕಾರಿ ಸಂಗಮೇಶ್ ಬಿ.ಎಸ್ ಮಾತನಾಡಿ, 80 ಸಾವಿರ ಎಕರೆ ವಿಸ್ತಾರ, 62 ಕಿ.ಮೀ ಉದ್ದ ಹಾಗೂ ನಾಲ್ಕು ಕಿ.ಮೀ ಅಗಲವಾದ ಈ ಪ್ರದೇಶದಲ್ಲಿ ನೂರಾರು ಪ್ರಭೇದಗಳ ಆಯುರ್ವೇದ ಸಸ್ಯ ಸಂಪತ್ತಿನೊಂದಿಗೆ ವಿಶಿಷ್ಟ ವನ್ಯಜೀವಿ ಸಂಪತ್ತು ಕೂಡ ಇದೆ. ಇವೆಲ್ಲವುಗಳ ರಕ್ಷಣೆಗಾಗಿ ಮತ್ತು ಕಾಡಿನ ಬೆಂಕಿಯ ರಕ್ಷಣೆಗಾಗಿ ಅರಣ್ಯ ಇಲಾಖೆ ಕ್ರಮ ಕೈಗೊಂಡಿದೆ ಎಂದು ವಿವರಿಸಿದರು.

ಪತ್ರಿಕಾ ವಿತರಕರ ಸಂಘದ ರಾಜ್ಯಾಧ್ಯಕ್ಷ ಶಂಕರ್ ಕುದುರೆಮೋತಿ, ಕರ್ನಾಟಕ ಪತ್ರಕರ್ತರ ಸಂಘದ ಪದಾಧಿಕಾರಿಗಳಾದ ಸುದೇಶ್ ಕುಮಾರ್, ಸಂಪತ್ ಕುಮಾರ್ ಮುಚ್ಚಳಂಬಿ, ಶಿವಾನಂದ ಚಿಕ್ಕಮಠ, ಮಲ್ಲಿಕಾರ್ಜುನ ಎಚ್, ಸಂಘದ ಜಿಲ್ಲಾಧ್ಯಕ್ಷರುಗಳಾದ ರಮೇಶ್ ಭಜಂತ್ರಿ, ಶರಣಪ್ಪ ಗುಮಗೇರಾ, ಡಿ.ಬಿ. ವಿಜಯಶಂಕರ್, ಡಾ ಮಂಜುನಾಥ, ಜಿ.ಎಂ ರಾಜಶೇಖರ, ಅರುಣ ಭೂಪಾಲ್, ಸೋಮಶೇಖರ್ ಹಿರೇಮಠ, ರಾಜು ದಖನಿ, ಮಾಲತೇಶ್ ಅಂಗೂರ್, ವಾಗೀಶ್ ಪಾಟೀಲ್, ರಮೇಶ್ ವತನ್, ಯೋಗೇಶ್ ಕುಮಾರ್, ನಟರಾಜ್ ಹಂಜಗಿಮಠ, ಕಾಶೀನಾಥ್ ಮಣೂರೆ, ಮಾರುತಿ ಬನವಗೋಳ, ಮಲ್ಲಿಕಾರ್ಜುನ್ ಹೆಗ್ ನಾಯಕ್, ಕಿರಣ ಚೌಗುಲಾ, ನಾಗೇಶ್ ವನ್ನೂರ್, ಹಿರೋಜಿ ಮಾವರಕರ್, ಪಾರಿಶ್ ಭೋಸ್ಲೆ, ಈರಣ್ಣ ಬುಡ್ಡಾಗೋಳ, ಸುಧೀರ್ ಕಳ್ಳೇ, ಕೊಟ್ರೇಶ್, ಸೌಮ್ಯ ಯಂಕಂಚಿ, ಬಸವರಾಜ ಗಾಣಿಗೇರ್, ಚೆನ್ನಪ್ಪ ಮಾದರ್, ದಾವಲ್ ಸಾಬ್ ಸೇಡಂ ಮುಂತಾದವರು ಇದ್ದರು.

> ಹಿರಿಯ ಸಾಹಿತಿ ಸಿದ್ದು ಯಾಪಲಪರವಿ ಮಾತನಾಡಿ, ಕೊರೋನಾ ರೋಗದ ಸಂದರ್ಭದಲ್ಲಿ ಆಕ್ಸಿಜನ್ ಕೊರತೆಯಿಂದ ಏನೆಲ್ಲಾ ಅವಾಂತರ ನಡೆಯಿತು ಎನ್ನುವುದನ್ನು ಎಲ್ಲರೂ ನೆನಪು ಮಾಡಿಕೊಳ್ಳಬೇಕು. ಇಲ್ಲವಾದಲ್ಲಿ ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ತೊಂದರೆ ಅನುಭವಿಸಬೇಕಾಗುತ್ತದೆ. ಕಪ್ಪತ್ತಗುಡ್ಡ ಮತ್ತು ಇಲ್ಲಿನ ಅತ್ಯಮೂಲ್ಯ ಪರಿಶುದ್ಧ ಪರಿಸರ ಯಥಾವತ್ತಾಗಿ ಉಳಿಯದೆ ಹೋದಲ್ಲಿ ಅದಕ್ಕೆ ಮಾಧ್ಯಮದವರು ಮತ್ತು ಬುದ್ಧಿಜೀವಿಗಳೇ ಕಾರಣವಾಗುತ್ತಾರೆ. ಅದಕ್ಕಾಗಿ ನಾವೆಲ್ಲ ಸೇರಿ ಈ ಕುರಿತು ಜನಜಾಗೃತಿ ಮೂಡಿಸುವ ಕಾರ್ಯ ಮಾಡೋಣ ಎಂದು ಕರೆ ನೀಡಿದರು.



## ಸರ್ಕಾರದ ಬಳಿ ರಸ್ತೆ ರಿಪೇರಿಗೂ ಹಣವಿಲ್ಲ, ಜಲಾಶಯ ಹೇಗೆ ನಿರ್ಮಾಣ ಮಾಡುತ್ತಾರೆ?

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ



ರಾಜ್ಯ ಸರ್ಕಾರದ ಬಳಿ ರಸ್ತೆ ರಿಪೇರಿಗೂ ಹಣವಿಲ್ಲ. ಇನ್ನು ಸಮಾನಾಂತರ ಜಲಾಶಯ ಹೇಗೆ ನಿರ್ಮಾಣ ಮಾಡುತ್ತಾರೆ? ಎಂದು ಸಚಿವ ಜೋಶಿ ಪ್ರಶ್ನಿಸಿದ್ದಾರೆ. ನಗರದಲ್ಲಿ ಮಾತನಾಡಿದ ಅವರು, ಬೇಕಾಬಿಟ್ಟಿ ಆಡಳಿತ, ಭ್ರಷ್ಟಾಚಾರದ ಫಲವಾಗಿ ರಾಜ್ಯ ಸರ್ಕಾರ ದಿವಾಳಿಯಾಗಿದೆ.

ಹಾಗಾಗಿ ಜಲಾಶಯಗಳ ವ್ಯವಸ್ಥಿತ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರಿದೆ. ರಾಜ್ಯ ಸರ್ಕಾರದ ಬಳಿ ರಸ್ತೆ ರಿಪೇರಿಗೂ ಹಣವಿಲ್ಲ. ಇನ್ನು ಸಮಾನಾಂತರ ಜಲಾಶಯ ಹೇಗೆ ನಿರ್ಮಾಣ ಮಾಡುತ್ತಾರೆ? ಎಂದು ಹೇಳಿದ್ದಾರೆ.

ಇನ್ನೂ ಹಿಂದೆ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿ ಆಗಿದ್ದಾಗ ಜಲಾಶಯಗಳ ನಿರ್ವಹಣೆಗೆ ಪ್ರತಿ ವರ್ಷ 10,000 ಕೋಟಿ ವೆಚ್ಚ ಮಾಡುವುದಾಗಿ ಹೇಳಿದ್ದರು. ಆದರೆ, ಪ್ರತಿ ವರ್ಷವಲ್ಲ ಆಡಳಿತದ 5 ವರ್ಷವೂ ಹತ್ತು ಸಾವಿರ ಕೋಟಿ ಖರ್ಚು ಮಾಡಲಿಲ್ಲ ಎಂದು ಹೇಳಿದ್ದಾರೆ.

## ಗಾಂಜಾ ಮಾರಾಟ ಮಾಡುತ್ತಿದ್ದ 17ಜನ ಆರೋಪಿಗಳ ಬಂಧನ..!

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಗಾಂಜಾ ಮಾರಾಟ ಮತ್ತು ಸೇವನೆ ಮಾಡಿದ 17 ಜನರನ್ನು ಬಂಧನ ಮಾಡಲಾಗಿದೆ. ಈ ಬಗ್ಗೆ ಹುಬ್ಬಳ್ಳಿ- ಧಾರವಾಡ ಪೊಲೀಸ್ ಉಪ ಆಯುಕ್ತ ಮಹಾನಿಂಗ ನಂದಗಾವಿ ಮಾಹಿತಿ ನೀಡಿದ್ದಾರೆ.

ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆ ಹಿಂಭಾಗದಲ್ಲಿ ಗಾಂಜಾ ಮಾರಾಟ ನಡೆಯುತ್ತಿತ್ತು. ಮಿರ್ಜಾನ ಅಷ್ಪಕ್ ಮುಲ್ಲಾ, ಶಿವಕುಮಾರ, ಇಕ್ಬಾಲ್ ಅಹ್ಮದ, ಆರೀಫ್, ಅಭಿಷೇಕ ದೇವಮಾನೆ, ಅಮೃತ ಹವಳದ, ಮೊಹ್ಮದ ರೆಹಾನ, ಸಾಧಿಕ ಕಿತಾಬ್‌ವಾಲೆ, ಮೆಹಬೂಬಸಾಬ ಡೌಗಿ ಬಂಧಿತರು.

ಘಟನೆ ಕುರಿತಂತೆ ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ವಿವರಣೆ ನೀಡಿದ ಡಿಸಿಪಿ ಮಹಾನಿಂಗ ನಂದಗಾವಿ, ಹಳೇ ಹುಬ್ಬಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 9 ಹಾಗೂ ಉಪನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 8 ಜನರನ್ನು ಬಂಧಿಸಲಾಗಿದೆ ಎಂದರು.

ಹಳೇ ಹುಬ್ಬಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿನ ಆನಂದನಗರದ ಕುಷ್ಠರೋಗ ಆಸ್ಪತ್ರೆ ಬಳಿ 9 ಜನ ಗಾಂಜಾ ಮಾರಾಟ ಮಾಡುತ್ತಿದ್ದವರ ಮೇಲೆ ಖಚಿತ ಮಾಹಿತಿ ಮೇರೆಗೆ ದಾಳಿ ಮಾಡಿದ್ದಾರೆ.

ಬಂಧಿತರಿಂದ 1,25,000 ರೂ. ಮೌಲ್ಯದ 1500 ಗ್ರಾಂ, ಗಾಂಜಾ, 60 ಸಾವಿರ ರೂ. ಮೌಲ್ಯದ ಮೊಬೈಲ್ ಫೋನ್, 2 ಸಾವಿರ ರೂ. ನಗದು ಸೇರಿ ಒಟ್ಟು 1,87,000 ರೂ. ಮೌಲ್ಯದ ವಸ್ತುಗಳನ್ನು ಪೊಲೀಸರು ಜಪ್ತಿ ಮಾಡಿದ್ದಾರೆ.

## ಗಂಭೀರ ಪ್ರಕರಣಗಳಲ್ಲೂ ಜಾಮೀನಿಗೆ ಆದ್ಯತೆ : ಸುಪ್ರೀಂ ಕೋರ್ಟ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಕಾನೂನುಬಾಹಿರ ಚಟುವಟಿಕೆಗಳ (ತಡೆಗಟ್ಟುವಿಕೆ) ಕಾಯಿದೆ 1967 ರಂತಹ ವಿಶೇಷ ಕಾನೂನುಗಳಲ್ಲಿಯೂ ಸಹ 'ಜಾಮೀನು ನಿಯಮ, ಜೈಲು ವಿನಾಯಿತಿ' ಎಂದು ಸುಪ್ರೀಂ ಕೋರ್ಟ್ ಮಂಗಳವಾರ (ಆಗಸ್ಟ್ 13) ಹೇಳಿದೆ.

ನ್ಯಾಯಮೂರ್ತಿ ಅಭಯ್ ಓಕಾ ಮತ್ತು ನ್ಯಾಯಮೂರ್ತಿ ಅಗಸ್ಟಿನ್ ಜಾರ್ಜ್ ಮಸಿಹ್ ಅವರ ಪೀಠವು ತರಬೇತಿ ಶಿಬಿರ ನಡೆಸಲು ನಿಷೇಧಿತ ಸಂಘಟನೆ ಪಾಪ್ಯುಲರ್ ಫ್ರಂಟ್ ಆಫ್ ಇಂಡಿಯಾ (ಪಿಎಫ್‌ಐ) ಗೆ ತನ್ನ ಮನೆಯನ್ನು ಬಾಡಿಗೆಗೆ ನೀಡಿದ ಪ್ರಕರಣ ಆರೋಪಿಗೆ ಜಾಮೀನು ನೀಡುವ ವೇಳೆ ಮೇಲಿನಂತೆ ತಿಳಿಸಿದೆ.

"ಜಾಮೀನು ಮಂಜೂರಾತಿ ನೀಡುವ ಪ್ರಕರಣವಿದ್ದಾಗ ನ್ಯಾಯಾಲಯವು ಜಾಮೀನು ನೀಡಲು ಹಿಂಜರಿಯಬಾರದು. ಪ್ರಾಸಿಕ್ಯೂಷನ್‌ನ ಆರೋಪಗಳು ತುಂಬಾ ಗಂಭೀರವಾಗಿರಬಹುದು, ಆದರೆ ನ್ಯಾಯಾಲಯದ ಕರ್ತವ್ಯವು ಕಾನೂನಿನ ಪ್ರಕಾರ ಜಾಮೀನಿಗಾಗಿ ಪ್ರಕರಣವನ್ನು ಪರಿಗಣಿಸುವುದು. ನ್ಯಾಯಾಲಯಗಳು ಅರ್ಹ ಪ್ರಕರಣಗಳಲ್ಲಿ ಜಾಮೀನು ನಿರಾಕರಿಸಲು ಪ್ರಾರಂಭಿಸಿದರೆ, ಅದು ಆರ್ಟಿಕಲ್ 21 ರ ಅಡಿಯಲ್ಲಿ ನೀಡಲಾದ ಮೂಲಭೂತ ಹಕ್ಕುಗಳ ಉಲ್ಲಂಘನೆಯಾಗುತ್ತದೆ" ಎಂದು ನ್ಯಾಯಾಧೀಶ ಅಭಯ್ ಓಕಾ ಅವರು ಹೇಳಿದ್ದಾರೆ.

ಜಾಮೀನು ನಿರಾಕರಿಸಿದ ಪಾಟ್ನಾ ಹೈಕೋರ್ಟ್ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸಿದ ಜಲಾಲುದ್ದೀನ್ ಖಾನ್‌ಗೆ ನ್ಯಾಯಾಲಯ ಜಾಮೀನು ನೀಡಿದೆ. ಮೇಲ್ಮನವಿದಾರ ಜಲಾಲುದ್ದೀನ್ ಖಾನ್ ಅವರು ಬಿಹಾರಕ್ಕೆ ಪ್ರಧಾನಿ ಮೋದಿಯವರ ಭೇಟಿಗೆ ಅಡ್ಡಿಪಡಿಸುವ ಯೋಜನೆಗಳಲ್ಲಿ ಭಾಗಿಯಾಗಿದ್ದಾರೆ ಮತ್ತು ನಿಷೇಧಿತ ಪಿಎಫ್‌ಐಗೆ ಸಂಬಂಧಿಸಿದ ಇತರ ಕಾನೂನುಬಾಹಿರ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಾರೆ ಎಂದು ಆರೋಪಿಸಲಾಗಿದೆ. ಅವರ ವಿರುದ್ಧ ಐಪಿಸಿಯ ಸೆಕ್ಷನ್ 120, 120 ಬಿ, 121,121 ಎ, 153 ಎ, 153 ಬಿ, 34 ಮತ್ತು ಯುಎಪಿಎ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

## ಬಾಂಗ್ಲಾದೇಶದ ಪದಚ್ಯುತ ಪ್ರಧಾನಿ ಶೇಖ್ ಹಸೀನಾ ವಿರುದ್ಧ ಕೊಲೆ ತನಿಖೆ ಆರಂಭಿಸಿದ ಕೋರ್ಟ್

■ವಿಜಯಸಾಕ್ಷಿ ಸುದ್ದಿ, ಬಾಂಗ್ಲಾದೇಶ



ಬಾಂಗ್ಲಾದೇಶದ ನ್ಯಾಯಾಲಯವು ಕಳೆದ ತಿಂಗಳು ನಾಗರಿಕ ಅಶಾಂತಿಯ ಸಂದರ್ಭದಲ್ಲಿ ವ್ಯಕ್ತಿಯೊಬ್ಬನನ್ನು ಕೊಂದ ಪ್ರಕರಣಕ್ಕೆ ಸಂಬಂಧಿಸಿದಂತೆ ಉಚ್ಚಾಟಿತ ಮಾಜಿ ಪ್ರಧಾನಿ ಶೇಖ್ ಹಸೀನಾ ಮತ್ತು ಅವರ ಆಡಳಿತದ ಆರು ಪ್ರಮುಖ ವ್ಯಕ್ತಿಗಳ ಮೇಲೆ ಮಂಗಳವಾರ ಕೊಲೆ ತನಿಖೆಯನ್ನು ಪ್ರಾರಂಭಿಸಿತು.

76 ವರ್ಷದ ಹಸೀನಾ ಅವರು ಒಂದು ವಾರದ ಹಿಂದೆ ಭಾರತಕ್ಕೆ ಹೆಲಿಕಾಪ್ಟರ್‌ನಲ್ಲಿ ಓಡಿಹೋದರು. ಅವರು ರಾಜೀನಾಮೆ ನೀಡುವಷ್ಟರಲ್ಲಿ ನಡೆದ ಗಲಭೆಯಲ್ಲಿ 450 ಕ್ಕೂ ಹೆಚ್ಚು ಜನರು ಕೊಲ್ಲಲ್ಪಟ್ಟರು.

"ಶೇಖ್ ಹಸೀನಾ ಮತ್ತು ಇನ್ನೂ ಆರು ಮಂದಿ ವಿರುದ್ಧ ಪ್ರಕರಣ ದಾಖಲಿಸಲಾಗಿದೆ" ಎಂದು ಖಾಸಗಿ ನಾಗರಿಕರೊಬ್ಬರ ಪರವಾಗಿ ಮೊಕದ್ದಮೆ ಹೂಡಿರುವ ವಕೀಲ ಮಾಮುನ್ ಮಿಯಾ ಹೇಳಿದ್ದಾರೆ.

ಬಾಂಗ್ಲಾದೇಶದ ಕಾನೂನಿನಡಿಯಲ್ಲಿ ಕ್ರಿಮಿನಲ್ ತನಿಖೆಯ ಮೊದಲ ಹಂತವಾದ "ಆರೋಪಿಗಳ ವಿರುದ್ಧದ ಕೊಲೆ ಪ್ರಕರಣ"ವನ್ನು ಸ್ವೀಕರಿಸಲು ಢಾಕಾ ಮೆಟ್ರೋಪಾಲಿಟನ್ ನ್ಯಾಯಾಲಯವು ಪೊಲೀಸರಿಗೆ ಆದೇಶಿಸಿದೆ ಎಂದು ಅವರು ಹೇಳಿದರು.

### ಆಗಸ್ಟ್ 15ರಂದು ಜಿಲ್ಲೆಯ ಸಮರ್ಥ ನಾಯಕ ಎಚ್.ಕೆ. ಪಾಟೀಲರ 71ನೇ ಜನ್ಮದಿನದ ಪ್ರಯುಕ್ತ ವಿಶೇಷ

# ಜನಸ್ಪಂದನೆಯ ನಾಯಕ ಎಚ್.ಕೆ. ಪಾಟೀಲ್

ಮೂರೂವರೆ ದಶಕಗಳಿಗೂ ಹೆಚ್ಚು ಕಾಲ ಸಕ್ರಿಯ ರಾಜಕಾರಣದಲ್ಲಿರುವ ಹನುಮಂತಗೌಡ ಕೃಷ್ಣೇಗೌಡ ಪಾಟೀಲರು ಧರ್ಮಸಿಂಗ್ ನೇತೃತ್ವದ ಸಮ್ಮಿಶ್ರ ಸರ್ಕಾರದಲ್ಲಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರಾಗಿದ್ದಾಗ ಕೇವಲ 11 ತಿಂಗಳ ಅವಧಿಯಲ್ಲಿ ಹಲವು ಮಹತ್ತರ ನೀತಿ-ನಿರೂಪಣೆ, ಸುಧಾರಣಾ ಕ್ರಮಗಳನ್ನು ಇಲಾಖೆಯ ವ್ಯಾಪ್ತಿಯಲ್ಲಿ ಕೈಗೊಂಡರು ಎಂಬುದು ಸುಲಭಕ್ಕೆ ಗೋಚರಿಸುವಂಥದ್ದು.



ಕಾನೂನು ಓದುವುದರಿಂದ ಸಾರ್ವಜನಿಕ ಜೀವನದಲ್ಲಿ ಅನುಕೂಲವಾಗುತ್ತದೆ ಎನ್ನುವ ಅರಿವಿದ್ದುದರಿಂದ ಹುಬ್ಬಳ್ಳಿಯ ಜೆಎಸ್‌ಎಸ್ ಸಕ್ರಿ ಕಾನೂನು ಕಾಲೇಜಿನಲ್ಲಿ ಎಲ್‌ಎಲ್‌ಬಿ ಪದವಿ ಪೂರೈಸಿದ ಎಚ್.ಕೆ. ಪಾಟೀಲರು ತಂದೆ ಕೆ.ಎಚ್. ಪಾಟೀಲ್ ಕಾನೂನು ಕಲಿತವರಲ್ಲ. ಆದರೆ, ಆ ಪರಿಣತಿಯನ್ನು ಗಳಿಸಿಕೊಂಡಿದ್ದರು. ವಕೀಲರಿಗಿಂತಲೂ ಹೆಚ್ಚಿನ ಕಾನೂನು ಜ್ಞಾನ ತಂದೆಯವರಿಗೆ ಇದೆ ಎಂಬ ಮಾತುಗಳು ಚರ್ಚೆಯ ಸಂದರ್ಭದಲ್ಲಿ ಬರುತ್ತಿದ್ದವು. ಇವೆಲ್ಲವೂ ಒಂದಲ್ಲಾ ಒಂದು ರೀತಿಯಲ್ಲಿ ಅವರ ಮೇಲೆ ಪ್ರಭಾವ ಬೀರಿದ್ದವು.

ರಾಜಕಾರಣದ ಮೇಲೆ ಇದ್ದ ಆಸಕ್ತಿ, ಅವರ ತಂದೆಯವರ ರಾಜಕೀಯ ಹಿನ್ನೆಲೆ ಹಾಗೂ ಅಂದಿನ ರಾಜಕೀಯ ಸನ್ನಿವೇಶದ ಜೊತೆಗೆ ಗೆಳೆಯರೆಲ್ಲರೂ ಸಕ್ರಿಯ ರಾಜಕಾರಣಕ್ಕೆ ಪ್ರವೇಶ ಮಾಡಬೇಕು ಎಂದು ಅಪೇಕ್ಷೆ ಪಟ್ಟಿದ್ದರಿಂದ 1984ರಲ್ಲಿ ಪದವೀಧರ ಕ್ಷೇತ್ರದ ಮೂಲಕ ವಿಧಾನ ಪರಿಷತ್ ಪ್ರವೇಶಿಸಿದರು. ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರ ಕಾಲದಲ್ಲಿ ಕಾಂಗ್ರೆಸ್ ಇಬ್ಭಾಗವಾಗಿ ಶ್ರೀಮಂತರು ಒಂದು ಕಡೆ, ಸಮಾನತೆ ಬಯಸುವವರು ಮತ್ತೊಂದು ಕಡೆಯಾಗಿದ್ದರು. ಇವೆಲ್ಲವೂ ರಾಜಕೀಯ ಪ್ರವೇಶಕ್ಕೆ ಎಚ್.ಕೆ. ಪಾಟೀಲರ ಮೇಲೆ ಪ್ರಭಾವ ಬೀರಿದ್ದವು.

ಹುಲಕೋಟಿ ಎಂಬ ಗ್ರಾಮದಿಂದ ರಾಷ್ಟ್ರದ ರಾಜಧಾನಿ ದಿಲ್ಲಿಯವರೆಗೆ ಸಹಕಾರಿ ಹೆಜ್ಜೆಗಳನ್ನು ಮೂಡಿಸಿ ಶ್ರೇಷ್ಠ ಸಂಸ್ಥೆಗಳನ್ನು ಕಟ್ಟಿ ಬೆಳೆಸಿದ ಎಚ್.ಕೆ. ಪಾಟೀಲರು ನಮ್ಮ ಕಣ್ಮುಂದಿನ ಹೆಮ್ಮೆಯ ಸಾಧಕರು. ಅವರು ಮೇಲ್ಮನೆಯಲ್ಲಿ ಮಾತನಾಡುತ್ತಿದ್ದ ವೈಖರಿ ಹಾಗೂ ಸಚಿವರಾಗಿದ್ದ ಸಂದರ್ಭದಲ್ಲಿ ಕೆಳಮನೆಯಲ್ಲಿ ಮಾರ್ಗದರ್ಶನ ಮಾಡುತ್ತಿದ್ದ ರೀತಿ ಎಂತಹವರಿಗೂ ಆದರ್ಶಪ್ರಾಯವಾಗಿದೆ.

ಒಂದೆಡೆ ಎಚ್.ಕೆ. ಪಾಟೀಲ್ ಅವರಲ್ಲಿನ ವಿವೇಚನೆ, ಯೋಚನೆ, ಯೋಜನೆ ಜೊತೆಗೆ ಅವರಲ್ಲಿನ ದೂರದೃಷ್ಟಿ ಎಲ್ಲಕ್ಕಿಂತ ಮುಖ್ಯವಾಗಿ ಒಬ್ಬ ಪ್ರಬುದ್ಧ ರಾಜಕಾರಣಿಯಲ್ಲಿರಬೇಕಾದ



ಅಧ್ಯಯನಶೀಲತೆ ಹಾಗೂ ಸೃಜನಶೀಲತೆ ಇವರ ಗುಣಸ್ವಭಾವ. ಯಾವುದೇ ಒಂದು ವಿಷಯ ಮಂಡನೆ ಮಾಡುವಾಗ ಅದರ ಆಳಕ್ಕಿಳಿದು ಅಧ್ಯಯನ ಮಾಡಿ, ಒಂದು ವೇಳೆ ತಮಗೆ ಗೊತ್ತಿರದ ವಿಷಯವಿದ್ದರೂ ತಜ್ಞರೊಂದಿಗೆ ಚರ್ಚಿಸಿ, ಸಲಹೆ ಪಡೆದುಕೊಳ್ಳುವ ಸ್ವಭಾವ ಎಚ್.ಕೆ. ಪಾಟೀಲರದ್ದು.

ರಾಜ್ಯ ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾಗಿದ್ದ ಅವಧಿಯಲ್ಲಿ, ಕರ್ನಾಟಕ ಸರ್ಕಾರವು 2015-16ನೇ ಸಾಲಿನ ಪಂಚಾಯತ್ ರಾಜ್ ಇಲಾಖೆಯಲ್ಲಿ ಮಾಹಿತಿ ಮತ್ತು ಸಂವಹನ ತಂತ್ರಜ್ಞಾನ (ಐಸಿಟಿ)ಯ ಪರಿಣಾಮಕಾರಿ ಬಳಕೆಗಾಗಿ ಕೇಂದ್ರವು ಸ್ಥಾಪಿಸಿದ ಇ-ಪ್ರಶಸ್ತಿಯನ್ನು ಪಡೆದುಕೊಂಡಿತು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು 24 ಏಪ್ರಿಲ್ 2017ರಂದು ಲಖನೌದಲ್ಲಿ ರಾಷ್ಟ್ರೀಯ ಪಂಚಾಯತ್ ರಾಜ್ ದಿನಾಚರಣೆಯ ಸಂದರ್ಭದಲ್ಲಿ ಈ ಪ್ರಶಸ್ತಿಯನ್ನು ಪ್ರದಾನ ಮಾಡಿದರು.

ಕರ್ನಾಟಕ ಸರ್ಕಾರದ ಅವರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು, 2014-15 ರಿಂದ 2017-18 ರವರೆಗೆ 4 ವರ್ಷಗಳ ಕಾಲ ಸತತವಾಗಿ ರಾಷ್ಟ್ರೀಯ ಪ್ರಶಸ್ತಿಗಳನ್ನು ಪಡೆದಿರುವ ಇವರು ರಾಜ್ಯ ರಾಜಕಾರಣದಲ್ಲಿಯೇ ವೈಶಿಷ್ಟ್ಯತೆಯನ್ನು ಮೆರೆದಿರುವ ಕೀರ್ತಿಗೆ ಪಾತ್ರರಾಗಿದ್ದಾರೆ.

ಪ್ರಸ್ತುತ ಕಾನೂನು ಮತ್ತು ಸಂಸದೀಯ ವ್ಯವಹಾರಗಳ, ಮತ್ತು ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾಗಿ ಗದಗ ಜಿಲ್ಲೆಯನ್ನು ಮಾದರಿ ಜಿಲ್ಲೆಯನ್ನಾಗಿಸುವ ಕನಸಿನೊಂದಿಗೆ, ಗದಗ-ಬೆಟಗೇರಿ ಅವಳಿ ನಗರವನ್ನು ಹೈಟೆಕ್ ಸಿಟಿಯನ್ನಾಗಿಸುವ ಮಹೋನ್ನತ ಧ್ಯೇಯವನ್ನು ಎಚ್.ಕೆ. ಪಾಟೀಲರು ಹೊಂದಿದ್ದಾರೆ. ಅವರ ಈ ಜನಪರ ಯೋಜನೆಯು ಶೀಘ್ರವಾಗಿ ಈಡೇರಲಿ.



- ರಾಘವೇಂದ್ರ ಪಾಲನಕರ.
ಸಾಮಾಜಿಕ ಕಾರ್ಯಕರ್ತರು,
ಗದಗ.

## ರಾಷ್ಟ್ರೀಯ ಗ್ರಂಥಪಾಲಕರ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಗ್ರಂಥಾಲಯದಲ್ಲಿ ಭಾರತೀಯ ಗ್ರಂಥಾಲಯ ವಿಜ್ಞಾನದ ಪಿತಾಮಹ ಡಾ.ಎಸ್. ಆರ್.ರಂಗನಾಥನ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ರಾಷ್ಟ್ರೀಯ ಗ್ರಂಥಪಾಲಕರ ದಿನವನ್ನು ಆಚರಿಸಲಾಯಿತು.

ಕಾಲೇಜಿನ ಪ್ರಾಂಶುಪಾಲ ಡಾ.ಡಿ.ಎಚ್.ನಾಯಕ ಮಾತನಾಡಿ, ಗಣಿತ ವಿಷಯದ ಅಧ್ಯಾಪಕರಾಗಿ, ಮದ್ರಾಸ್ ವಿವಿಯ ಮೊದಲ ಗ್ರಂಥಪಾಲಕರಾಗಿ ಸೇವೆ ಸಲ್ಲಿಸಿದ ಡಾ.ಎಸ್.ಆರ್. ರಂಗನಾಥನ್ ಅವರ ಜನ್ಮದಿನವಾದ ಆಗಸ್ಟ್ 12ರಂದು ರಾಷ್ಟ್ರೀಯ ಗ್ರಂಥಪಾಲಕರ ದಿನವನ್ನಾಗಿ 2007ರಲ್ಲಿ ಸರಕಾರ ಘೋಷಿಸಿದೆ. ಇಂದಿನ ಡಿಜಿಟಲ್ ಯುಗದಲ್ಲಿಯೂ ಗ್ರಂಥಾಲಯ



ವಿಜ್ಞಾನದ ಪಿತಾಮಹರಾದ ಡಾ. ಎಸ್‌ಆರ್. ರಂಗನಾಥನ್ ಅವರನ್ನು ನಾವು ಸ್ಮರಿಸಲೇಬೇಕು. ಇಂದಿನ ಆಧುನಿಕ ತಂತ್ರಜ್ಞಾನದ ಯುಗದಲ್ಲಿ ಗ್ರಂಥಾಲಯ ಮತ್ತು ಅಂತರ್ಜಾಲದ ಮೂಲಕ ಜ್ಞಾನವನ್ನು ಗಳಿಸಿಕೊಳ್ಳುತ್ತಿದ್ದೇವೆ ಎಂದರೆ ಅದು ಗ್ರಂಥಾಲಯದ ಸೇವೆಯಿಂದ. ಇದಕ್ಕೆ ರಂಗನಾಥನ್ ಅವರ ಕೊಡುಗೆ ದೊಡ್ಡದು ಎಂದು ಅವರು ಸ್ಮರಿಸಿದರು.

ಈ ಸಂದರ್ಭದಲ್ಲಿ ಕಾಲೇಜಿನ ಬೋಧಕ ಸಿಬ್ಬಂದಿ ಡಾ.ಟಿ.ವಿ.ವಾರುಣಿ, ಡಾ.ಭಾಗ್ಯಜ್ಯೋತಿ, ಶಿವನಾಥ್.ಇ.ಜಿ, ಅಜಯಕುಮಾರ್, ವಸಂತ್‌ಕುಮಾರ್, ಸತೀಶ್, ಶಂಕರಾನಂದ.ಡಿ., ಹನುಮಂತಗೌಡ, ಮಹೇಶ್.ಎನ್., ಬುಡ್ಡನಗೌಡ, ಗೀತಾ ಬನ್ನಿಕೊಪ್ಪ, ಬೋಧಕೇತರ ಸಿಬ್ಬಂದಿ ಮಹಾಂತೇಶ, ಅನುಷಾ, ಸಂಜನಾ, ಸುರೇಶ ಕಿನ್ನಾಳ, ಹಸನ್, ಗ್ರಂಥಪಾಲಕ ಬೀರಲಿಂಗೇಗೌಡ ಸೇರಿದಂತೆ ವಿದ್ಯಾರ್ಥಿಗಳು ಇತರರು ಇದ್ದರು. ಗ್ರಂಥಾಲಯ ಸಹಾಯಕ ವಿರೂಪಾಕ್ಷಿ.ಬಿ ಸ್ವಾಗತಿಸಿದರು. ಬಸವರಾಜ ಕರುಗಲ್ ವಂದಿಸಿದರು.

## ವೃಕ್ಷಪ್ರೇಮ ಬೂಟಾಟಿಕೆಯಾಗದಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ



ಪರಿಸರ ದಿನಾಚರಣೆ ಸಂದರ್ಭದಲ್ಲಿ ಶಾಲೆ, ಕಾಲೇಜು, ಸಂಘ-ಸಂಸ್ಥೆಗಳವರು, ಅರಣ್ಯ ಇಲಾಖೆಯವರು ರಸ್ತೆ ಬದಿಗಳಲ್ಲಿ ಗಿಡ ನೆಡುವ ಕಾರ್ಯಕ್ರಮ ಹಮ್ಮಿಕೊಂಡು ಅತ್ಯಂತ ವೈಭವದಿಂದ ಸಸಿ ನೆಟ್ಟು, ನೀರು ಹಾಕಿ ಬರುತ್ತಾರೆ. ಆದರೆ, ಅವರೆಂದಿಗೂ ತಾವು ನೆಟ್ಟ ಗಿಡಗಳ ಸ್ಥಿತಿ ಏನಾಗಿದೆ ಎಂಬುದನ್ನು ಎಂದೂ ನೋಡುವದಿಲ್ಲ ಎಂಬುದು ವಿಪರ್ಯಾಸ ಎಂದು ಹಿರಿಯ ನಾಟಕಕಾರ ಹಾಗೂ ರಂಗಸಾಹಿತಿ ಪ್ರೊ. ಆರ್.ಎನ್. ಕುಲಕರ್ಣಿ ಖೇದ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ಹೀಗೆ ನೆಟ್ಟ ಗಿಡಗಳು ಬಿಡಾಡಿ ದನಗಳ, ಆಡು, ಕುರಿಗಳ ಹಾಗೂ ಉರುವಲುಗಳ ಪಾಲಾಗುತ್ತವೆಂಬುದು ಅತೀವ ದುಃಖದ ಸಂಗತಿ. ಅವುಗಳಲ್ಲಿ ಅನೇಕ ಗಿಡಗಳು ಪಾಲನೆ-ಪೋಷಣೆ ಇಲ್ಲದೇ ಬಾಡಿ ಹೋಗುತ್ತವೆ ಎಂಬುದು ಸತ್ಯ. ಇಂಥ ಕಾರ್ಯಕ್ರಮಗಳನ್ನು ಮಾಡುವುದಕ್ಕಿಂತ ಬಿಡುವುದು ಉತ್ತಮ. ಅದರಿಂದ ಸರ್ಕಾರದ ಹಾಗೂ ಖಾಸಗಿಯರವ ಕೋಟ್ಯಾಂತರ ಹಣ ಉಳಿತಾಯವಾಗುತ್ತದೆ.

ಒಂದು ವೇಳೆ ಸಸಿ ನೆಟ್ಟು ನೈಜ ಪರಿಸರ ಕಾಳಜಿ ತೋರುವುದಿದ್ದರೆ, ನೆಟ್ಟ ಸಸಿಗಳ ಪಾಲನೆ ಪೋಷಣೆಗೂ ಯೋಜನೆ ರೂಪಿಸಬೇಕು. ಇಲಾಖೆಯೂ ಪ್ರತಿವರ್ಷ ನೆಟ್ಟ ಗಿಡಗಳೆಷ್ಟು ಹಾಗೂ ರಕ್ಷಿಸಲ್ಪಟ್ಟ ಗಿಡಗಳೆಷ್ಟು ಎಂದು ಜನತೆಯ ಮುಂದೆ ಪ್ರಸ್ತುತಪಡಿಸಬೇಕು. ಪರಿಸರ ಕಾಳಜಿ ಬೂಟಾಟಿಕೆಯಾಗಬಾರದು ಎಂದು ಅಭಿಪ್ರಾಯಪಟ್ಟಿದ್ದಾರೆ.

## ಪೂರ್ಣಗೊಳ್ಳದ ಅದಾನಿ ವಿರುದ್ಧದ ಸೆಬಿ ತನಿಖೆ : ಮತ್ತೊಮ್ಮೆ ಕೋರ್ಟ್ ಮೆಟ್ಟಿಲೇರಿದ ವಕೀಲ ವಿಶಾಲ್ ತಿವಾರಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ


ಉದ್ಯಮಿ ಗೌತಮ್ ಅದಾನಿ ಸಮೂಹದ ಸಾಗರೋತ್ತರ ಹೂಡಿಕೆಯಲ್ಲಿ ಭಾರತೀಯ ಷೇರು ಪೇಟೆ ನಿಯಂತ್ರಣ ಮಂಡಳಿ (ಸೆಬಿ) ಅಧ್ಯಕ್ಷೆ ಮಾಧವಿ ಬುಚ್ ದಂಪತಿಯ ಪಾಲುದಾರಿಕೆ ಇದೆ ಎಂಬ ಹಿಂಡೆನ್‌ಬರ್ಗ್ ವರದಿ ಸಂಚಲನ ಸೃಷ್ಟಿಸಿರುವ ನಡುವೆ, ಸುಪ್ರೀಂ ಕೋರ್ಟ್‌ಗೆ ಅರ್ಜಿಯೊಂದು ಸಲ್ಲಿಕೆಯಾಗಿದೆ.

ಈ ಹಿಂದೆ, 2023ರಲ್ಲಿ ಅದಾನಿ ಶೇರು ಹಗರಣ ಸಂಬಂಧ ತನಿಖೆ ಕೋರಿ ಅರ್ಜಿ ಸಲ್ಲಿಸಿದವರಲ್ಲಿ ಒಬ್ಬರಾದ ವಕೀಲ ವಿಶಾಲ್ ತಿವಾರಿ ಈ ಬಾರಿಯೂ ಅರ್ಜಿ ಸಲ್ಲಿಸಿದ್ದು, ಅದಾನಿ ಸಮೂಹ ಸಂಸ್ಥೆಗಳ ಕುರಿತ ತನಿಖೆ ಪೂರ್ಣಗೊಳಿಸುವಂತೆ ಸೆಬಿಗೆ ನಿರ್ದೇಶಿಸಲು ಕೋರಿದ್ದಾರೆ.

ಅದಾನಿ ಸಮೂಹದ ಸಂಸ್ಥೆಗಳ ಲೆಕ್ಕಪತ್ರ ವಂಚನೆ ಮತ್ತು ಷೇರು ತಿರುಚುವಿಕೆ ಕುರಿತು ಹಿಂಡೆನ್‌ಬರ್ಗ್ ಸಂಶೋಧನಾ ವರದಿಯಲ್ಲಿ ಹೊರಿಸಲಾದ ಆರೋಪಗಳ ಬಗ್ಗೆ ಎಸ್‌ಐಟಿ, ಸಿಬಿಐ ತನಿಖೆಗೆ ಆದೇಶಿಸಲು ವಕೀಲ ವಿಶಾಲ್ ತಿವಾರಿ ನವೆಂಬರ್ 24, 2023ರಲ್ಲಿ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಕಳೆದ ಜನವರಿಯಲ್ಲಿ ಸುಪ್ರೀಂ ಕೋರ್ಟ್ ಅರ್ಜಿಯನ್ನು ತಿರಸ್ಕರಿಸಿತ್ತು.

ಸೆಬಿ ಈಗಾಗಲೇ ತನಿಖೆ ನಡೆಸುತ್ತಿದೆ. ಅದರಲ್ಲಿ ಹಸ್ತಕ್ಷೇಪ ಮಾಡಲು ಯಾವುದೆ ಸೂಕ್ತ ಕಾರಣಗಳಿಲ್ಲ ಎಂದು ಕೋರ್ಟ್ ಹೇಳಿತ್ತು.

ಈ ವೇಳೆ ಅದಾನಿ ಸಮೂಹದ ವಿರುದ್ಧದ 24 ಪ್ರಕರಣಗಳ ಪೈಕಿ 22 ಪ್ರಕರಣಗಳ ತನಿಖೆಯನ್ನು ಸೆಬಿ ಪೂರ್ಣಗೊಳಿಸಿದೆ ಎಂದು ಕೋರ್ಟ್ ಗಮನಿಸಿತ್ತು. ಸಾಲಿಸಿಟರ್ ಜನರಲ್ ಅವರ ಭರವಸೆಯನ್ನು ಗಣನೆಗೆ ತೆಗೆದುಕೊಂಡ ನ್ಯಾಯಾಲಯವು, ಉಳಿದ 2 ಪ್ರಕರಣಗಳ ತನಿಖೆಯನ್ನು ಮೂರು ತಿಂಗಳ ಅವಧಿಯಲ್ಲಿ




ಪೂರ್ಣಗೊಳಿಸುವಂತೆ ಸೆಬಿಗೆ ಸೂಚಿಸಿತ್ತು.

ಸೆಬಿ ತನಿಖೆಯನ್ನು ಅನುಮಾನಿಸಿ ಅರ್ಜಿದಾರರು ಪತ್ರಿಕೆಯ ವರದಿಗಳು ಮತ್ತು ಸಂಘಟಿತ ಅಪರಾಧ ಮತ್ತು ಭ್ರಷ್ಟಾಚಾರ ವರದಿ ಮಾಡುವ ಯೋಜನೆಯ (ಔಅಅಖಕ) ವರದಿ ತೋರಿಸಿರುವುದನ್ನು ಮಾನ್ಯ ಮಾಡಲು ನ್ಯಾಯಾಲಯ ನಿರಾಕರಿಸಿತ್ತು. ಆಧಾರ ರಹಿತ ಸುದ್ದಿ ವರದಿಗಳು ಮತ್ತು ಮೂರನೇ ಪಕ್ಷದ ಸಂಸ್ಥೆಗಳ ವರದಿಗಳ ಆಧಾರದ ಮೇಲೆ ಶಾಸನಬದ್ಧ ಸಂಸ್ಥೆಯ ತನಿಖೆಯನ್ನು ಅನುಮಾನಿಸಲು ಸಾಧ್ಯವಿಲ್ಲ ಎಂದು ನ್ಯಾಯಾಲಯ ಹೇಳಿತ್ತು.

ನಂತರ, ಈ ವರ್ಷದ ಜೂನ್‌ನಲ್ಲಿ ಮತ್ತೊಂದು ಅರ್ಜಿ ಸಲ್ಲಿಸಿದ್ದ ವಿಶಾಲ್ ತಿವಾರಿ, ಜನವರಿಯಲ್ಲಿ ನೀಡಿದ ಆದೇಶದಂತೆ ಕಾಲಾವಧಿಯ ಒಳಗೆ ತನಿಖೆ ಪೂರ್ಣಗೊಳಿಸಲು ಸೆಬಿಗೆ ನಿರ್ದೇಶಿಸುವಂತೆ ಕೋರಿದ್ದರು. ಆದರೆ, ಈ ಅರ್ಜಿಯನ್ನು ಸ್ವೀಕರಿಸಲು ನಿರಾಕರಿಸಿದ ಸುಪ್ರೀಂ ಕೋರ್ಟ್ ರಿಜಿಸ್ಟ್ರಾರ್ (ಲಿಸ್ಟಿಂಗ್), ನ್ಯಾಯಾಲಯ ಮೂರು ತಿಂಗಳೊಳಗೆ ತನಿಖೆ ಪೂರ್ಣಗೊಳಿಸುವಂತೆ ಸ್ಪಷ್ಟ ನಿರ್ದೇಶನ ನೀಡಿಲ್ಲ ಎಂದಿದ್ದರು.

ಇದೀಗ ಅದಾನಿ ಸಮೂಹಕ್ಕೆ ಸಂಬಂಧಪಟ್ಟಂತೆ ಸೆಬಿ ಅಧ್ಯಕ್ಷೆಯ ವಿರುದ್ಧವೇ ಹಿಂಡನ್‌ಬರ್ಗ್ ಆರೋಪ ಮಾಡಿರುವ ಹಿನ್ನೆಲೆ, ತನಿಖೆ ಪೂರ್ಣಗೊಳಿಸುವಂತೆ ಸೆಬಿಗೆ ನಿರ್ದೇಶಿಸಲು ವಿಶಾಲ್ ತಿವಾರಿ ಮತ್ತೊಮ್ಮೆ ನ್ಯಾಯಾಲಯವನ್ನು ಕೋರಿದ್ದಾರೆ.

## ವಯನಾಡ್ ಭೂಕುಸಿತ: ಕಾಣೆಯಾದವರ ದಾಖಲೆ ವಿತರಿಸಲು ವಿಶೇಷ ಶಿಬಿರ

■ವಿಜಯಸಾಕ್ಷಿ ಸುದ್ದಿ, ವಯನಾಡ್

ಕೇರಳದ ವಯನಾಡಿನಲ್ಲಿ ಸಂಭವಿಸಿದ ಮಾರಣಾಂತಿಕ ಭೂಕುಸಿತದಲ್ಲಿ ಕಳೆದುಹೋದ ಜನರ ದಾಖಲೆಗಳು ಮತ್ತು ಪ್ರಮಾಣಪತ್ರಗಳನ್ನು ಮರುಪಡೆಯಲು ಸಹಾಯ ಮಾಡಲು ಮೂರು ಶಾಲೆಗಳು ಸೋಮವಾರದಿಂದ ಒಟ್ಟಾಗಿ ಶಿಬಿರವನ್ನು ಆಯೋಜಿಸಿವೆ.

ಮೇಪಾಡಿ ಸರ್ಕಾರಿ ಪ್ರೌಢಶಾಲೆ, ಸೇಂಟ್ ಜೋಸೆಫ್ ಯುಪಿ ಶಾಲೆ ಮತ್ತು ಮೌಂಟ್ ತಾಬೋರ್ ಪ್ರೌಢಶಾಲೆಗಳು ಮೆಪ್ಪಾಡಿ ಜಿಲ್ಲೆಯ ಮುಂಡಕೈ, ಚುರಲ್‌ಮಲಾ ಮತ್ತು ಮೆಪ್ಪಾಡಿ ನಿವಾಸಿಗಳಿಗೆ ತಮ್ಮ ದಾಖಲೆಗಳನ್ನು ಮರು ಪಡೆಯಲು ಸಹಾಯ ಮಾಡುತ್ತವೆ.

ಐಟಿ ಮಿಷನ್, ಅಕ್ಷಯ ಮತ್ತು ಜಿಲ್ಲಾ ಆಡಳಿತ ಕೇಂದ್ರಗಳ ಸಮನ್ವಯದಲ್ಲಿ ಶಿಬಿರವನ್ನು ಆಯೋಜಿಸಲಾಗಿದೆ. ವಿಪತ್ತು ನಿರ್ವಹಣಾ ಪ್ರಾಧಿಕಾರದ ನಿರ್ದೇಶನದ ಮೇರೆಗೆ ಯೋಜನೆ ಪ್ರಗತಿಯಲ್ಲಿದೆ. ವಿಕೋಪದಲ್ಲಿ ಪ್ರಮುಖ ದಾಖಲೆಗಳನ್ನು ಕಳೆದುಕೊಂಡವರಿಗೆ ಸಹಾಯ ಮಾಡುವ ಉದ್ದೇಶದಿಂದ ಶಿಬಿರವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಿ.ಆರ್.ಮೇಘಶ್ರೀ ಹೇಳಿದರು.

ಅಂದಾಜು 225 ಜನರನ್ನು ಬಲಿತೆಗೆದುಕೊಂಡ ಮತ್ತು 130 ಜನರ ನಾಪತ್ತೆಗೆ ಕಾರಣವಾದ ದುರಂತದಿಂದ ವಯನಾಡ್ ಇನ್ನೂ ತತ್ತರಿಸುತ್ತಿದೆ. ಬದುಕುಳಿದವರು ಈಗ ತಲೆಗೆ ಸೂರು ಇಲ್ಲದೆ ಸರ್ಕಾರದ ನಿರಾಶ್ರಿತ ಶಿಬಿರಗಳಲ್ಲಿ ವಾಸಿಸುತ್ತಿದ್ದಾರೆ.

ಶಾಲೆಗಳು ಆಯೋಜಿಸುವ ಶಿಬಿರದ ಜೊತೆಗೆ, ವಿವರವಾದ ಹುಡುಕಾಟವನ್ನು ಸಹ ಯೋಜಿಸಲಾಗಿದೆ.

## ಬಾಲಕಿ ಮೇಲೆ ಅತ್ಯಾಚಾರ ಯತ್ನ ಆರೋಪ; ಸಮಾಜವಾದಿ ಪಕ್ಷದ ನಾಯಕನ ಬಂಧನ



■ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

15 ವರ್ಷದ ಬಾಲಕಿಯ ಮೇಲೆ ಅತ್ಯಾಚಾರಕ್ಕೆ ಯತ್ನಿಸಿದ ಆರೋಪದ ಮೇಲೆ ಸಮಾಜವಾದಿ ಪಕ್ಷದ ನಾಯಕ ನವಾಬ್ ಸಿಂಗ್ ಯಾದವ್ ಅವರನ್ನು ಸೋಮವಾರ ಬಂಧಿಸಲಾಗಿದೆ. ಉತ್ತರ ಪ್ರದೇಶ ಪೊಲೀಸರಿಗೆ ಮಧ್ಯರಾತ್ರಿ 1:30 ರ ಸುಮಾರಿಗೆ 112 ಸಹಾಯವಾಣಿ ಸಂಖ್ಯೆಗೆ ತುರ್ತ ಕರೆ ಬಂದಿತ್ತು ಎನ್ನಲಾಗಿದೆ.

"ಕಳೆದ ರಾತ್ರಿ 1.30 ರ ಸುಮಾರಿಗೆ ಯುಪಿ ಪೊಲೀಸರಿಗೆ 112ಗೆ ಕರೆ ಬಂದಿತು, ಅದರಲ್ಲಿ ಹುಡುಗಿಯೊಬ್ಬಳು ತನ್ನನ್ನು ವಿವಸ್ತ್ರಗೊಳಿಸಲಾಗಿದೆ ಮತ್ತು ತನ್ನ ಮೇಲೆ ಹಲ್ಲೆಗೆ ಪ್ರಯತ್ನಿಸಲಾಗಿದೆ ಎಂದು ಹೇಳಿದ್ದಾಳೆ" ಎಂದು ಕನೌಜ್ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಅಮಿತ್ ಕುಮಾರ್ ಆನಂದ್ ಹೇಳಿದ್ದಾರೆ.

ಘಟನಾ ಸ್ಥಳಕ್ಕೆ ಬಂದ ನಂತರ, ಪೊಲೀಸರು ಹದಿಹರೆಯದವರನ್ನು ರಕ್ಷಿಸಿದ್ದು, ಆಕ್ಷೇಪಾರ್ಹ ಸ್ಥಿತಿಯಲ್ಲಿ ಕಂಡುಬಂದ ನವಾಬ್ ಸಿಂಗ್ ಯಾದವ್ ಅವರನ್ನು ಬಂಧಿಸಿದರು ಎಂದು ಅವರು ಹೇಳಿದರು.

ತನಗೆ ಉದ್ಯೋಗಾವಕಾಶ ಬೇಕಾಗಿದ್ದರಿಂದ ತನ್ನ ತಂದೆಯ ಚಿಕ್ಕಮ್ಮ ಯಾದವ್ ಅವರ ನಿವಾಸಕ್ಕೆ ಕರೆದೊಯ್ದರು ಎಂದು ಬಾಲಕಿ ವಿಚಾರಣೆಯ ಸಮಯದಲ್ಲಿ ಪೊಲೀಸರಿಗೆ ತಿಳಿಸಿದ್ದಾಳೆ.

ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ಮತ್ತು ಪೋಕ್ಸೊ ಕಾಯ್ದೆಯ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದ್ದು, ಮುಂದಿನ ತನಿಖೆ ನಡೆಯುತ್ತಿದೆ.

ಇದನ್ನು "ಪಿತೂರಿ" ಎಂದು ಕರೆದ ನವಾಬ್ ಸಿಂಗ್ ಯಾದವ್, "ಇದೊಂದು ಬಂಡವಾಳಶಾಹಿ ಪಿತೂರಿ; ಬಲಿಪಶು ಇದನ್ನು ನಿರಾಕರಿಸುತ್ತಾಳೆ. ಆದರೆ, ಅದರ ಹೊರತಾಗಿಯೂ, ಅವಳು ವೈದ್ಯಕೀಯ ಪರೀಕ್ಷೆಗೆ ಒಳಗಾಗುತ್ತಾಳೆ. ಈ ಅನ್ಯಾಯದ ವಿರುದ್ಧ ನಮ್ಮ ಹೋರಾಟದಲ್ಲಿ ನಾವು ದೃಢವಾಗಿರುತ್ತೇವೆ" ಎಂದು ಹೇಳಿದ್ದಾರೆ.

ನ್ಯಾಯಾಲಯವು ಎಸ್‌ಪಿ ನಾಯಕನನ್ನು 14 ದಿನಗಳ ನ್ಯಾಯಾಂಗ ಬಂಧನಕ್ಕೆ ಕಳುಹಿಸಿದೆ. ನವಾಬ್ ಸಿಂಗ್ ಸಾವಿನ ಸುದ್ದಿ ಹೊರಬೀಳುತ್ತಿದ್ದಂತೆ ಸಮಾಜವಾದಿ ಪಕ್ಷ ನಾಯಕನಿಂದ ದೂರವಾಗತೊಡಗಿತು. ಸಿಂಗ್ ಅವರು ಪಕ್ಷದೊಂದಿಗೆ ಸಂಬಂಧ ಹೊಂದಿಲ್ಲ ಎಂದು ಕನೌಜ್ ಜಿಲ್ಲಾಧ್ಯಕ್ಷ ಕಲೀಂ ಖಾನ್ ಹೇಳಿದ್ದಾರೆ.

### ಅಂತಾರಾಷ್ಟ್ರೀಯ ಯುವದಿನ, ಹೆಚ್.ಐ.ವಿ. ಏಡ್ಸ್ ಅರಿವಿನ ಮಾಸಾಚರಣೆ ಕಾರ್ಯಕ್ರಮ

# ದೇಶದ ಭವಿಷ್ಯ ರೂಪಿಸುವಲ್ಲಿ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಯುವಜನಾಂಗ ಮಾನಸಿಕ, ಸಾಮಾಜಿಕ, ದೈಹಿಕವಾಗಿ ಆರೋಗ್ಯವಂತರಾಗಿ ಸಮಾಜದಲ್ಲಿ ಒಳ್ಳೆಯ ಸಂಪನ್ಮೂಲ ವ್ಯಕ್ತಿಗಳಾಗಿ ಬೆಳೆಯಬೇಕು ಎಂದು ಡಾ.ಅರುಂಧತಿ ಕೆ ಹೇಳಿದರು.

ನಗರದ ಡಾ. ಡಿ.ಸಿ. ಪಾವಟೆ ಶಿಕ್ಷಣ ಮಹಾವಿದಾಲಯದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಜಿಲ್ಲೆಯ ರೆಡ್ ರಿಬ್ಬನ್ ಕಾಲೇಜುಗಳು ಮತ್ತು ಜಿಲ್ಲೆಯ ಎಲ್ಲ ಶಿಕ್ಷಣ ಮಹಾವಿದ್ಯಾಲಯಗಳು ಹಾಗೂ ಡಾ. ಡಿ.ಸಿ. ಪಾವಟೆ ಶಿಕ್ಷಣ ಮಹಾವಿದಾಲಯ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಮಟ್ಟದ ಅಂತಾರಾಷ್ಟ್ರೀಯ ಯುವ ದಿನ ಹಾಗೂ ತೀವ್ರತರ ಹೆಚ್.ಐ.ವಿ. ಅರಿವಿನ ಮಾಸಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.



ಪ್ರತಿಯೊಬ್ಬರೂ ಹೆಚ್.ಐ.ವಿ. ಏಡ್ಸ್ ಅರಿವಿನ ಮಾಸಾಚರಣೆಯಲ್ಲಿ ರೋಗದ ಬಗ್ಗೆ ಮಾಹಿತಿ ತಿಳಿಯಬೇಕು. ಇಂದಿನ ಯುವಕರು ಸಧೃಢ ಆರೋಗ್ಯವನ್ನು ಹೊಂದಿ, ದೇಶದ ಭವಿಷ್ಯ ರೂಪಿಸುವಲ್ಲಿ ಕೈಜೋಡಿಸಬೇಕು. ಇಂದಿನ ಯುವ ಜನಾಂಗದಲ್ಲಿ ಸಾಮಾಜಿಕ ಮೌಲ್ಯಗಳು ಕಡಿಮೆಯಾಗಿದ್ದು, ಗುರು-ಹಿರಿಯರು, ತಂದೆ-ತಾಯಿ ಎನ್ನುವ ಗೌರವವಿಲ್ಲದೆ ಆಧುನಿಕ ಮಾಧ್ಯಮದ ತಂತ್ರಜ್ಞಾನಕ್ಕೆ ಮಾರು ಹೋಗಿ ತಮ್ಮ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಯುವಜನರು ತಮ್ಮ ಜವಾಬ್ದಾರಿಯನ್ನು ಅರಿತು ದೇಶದ ಒಳಿತಿಗೆ ಪೂರಕವಾದ ತೀರ್ಮಾನವನ್ನು ಕೈಗೊಂಡು ಸದೃಡವಾದ ದೇಶ ಕಟ್ಟುವಲ್ಲಿ ಕೈ ಜೋಡಿಸಬೇಕೆಂದು ತಿಳಿಸಿದರು.

ಜಿಲ್ಲಾ ಐಸಿಟಿಸಿ ಮೇಲ್ವಿಚಾರಕ ಬಿ.ಬಿ. ಲಾಳಗಟ್ಟಿ ಅಂತಾರಾಷ್ಟ್ರೀಯ ಯುವ ದಿನಾಚರಣೆಯ ಮಹತ್ವವನ್ನು ತಿಳಿಸಿ, ಜಾತಿ, ಧರ್ಮ, ಲಿಂಗ ಗುಂಪು ಆಧಾರಿತ ಸವಾಲುಗಳನ್ನು ಎದುರಿಸಿ ಯುವಕರು ಸನ್ನಡತೆಯನ್ನು ಅಳವಡಿಸಿಕೊಳ್ಳಬೇಕು. ಸ್ವಾಮಿ ವಿವೇಕಾನಂದರು ಯುವಕರ ಕಣ್ಮಣಿಯಾಗಿದ್ದು, ಅವರ ಪ್ರೇರಣೆಯಂತೆ ಶ್ರದ್ಧೆ, ಸಹನೆ, ಸತತ ಪ್ರಯತ್ನ ಜಯ ಸಾಧಿಸಲು ಅಗತ್ಯವಾಗಿ ಬೇಕಾದ ಮೂರು ಸಾಧನಗಳ ಜೊತೆಗೆ ಆತ್ಮವಿಶ್ವಾಸವಿದ್ದರೆ ವಿಜಯಲಕ್ಷ್ಮೀ ಒಲಿಯುತ್ತಾಳೆಂದು ತಿಳಿಸಿದರು.

ಪ್ರಾಚಾರ್ಯರಾದ ಎಸ್.ಪಿ. ಗೌಳಿ ಮಾತನಾಡಿ, ಇಂದಿನ ಯುವಕರು ದುಶ್ಚಟಗಳಿಂದ ದೂರವಿದ್ದು, ಯೌವನವನ್ನು ಜೋಪಾನ ಮಾಡಿಕೊಳ್ಳಬೇಕು ಹಾಗೂ ಇಲಾಖೆಯ ವಿವಿಧ ಸಾಮಾಜಿಕ ಕಾರ್ಯಗಳಲ್ಲಿ ಪಾಲ್ಗೊಂಡು ಸಾಮಾಜಿಕಸೇವೆಗೆ ಮುಂದಾಗಬೇಕು ಎಂದರು.

ಸಮಾರಂಭದಲ್ಲಿ ಎನ್.ಎಸ್.ಎಸ್. ಅಧಿಕಾರಿ ಪ್ರೊ. ಎಮ್. ಎಮ್. ನದಾಫ್, ರೆಡ್ ಕ್ರಾಸ್ ಮುಖ್ಯಸ್ಥೆ ಕೆ.ಬಿ. ಸಂಕನಗೌಡರ ಹಾಗೂ ಕಾಲೇಜು ಆಡಳಿತ ಮಂಡಳಿ, ಉಪನ್ಯಾಸಕ ವರ್ಗ ಹಾಜರಿದ್ದರು. ಕಾವೇರಿ ಬಡಿಗೇರ ಪ್ರಾರ್ಥಿಸಿದರು. ಪವಿತ್ರಾ ಹುಬ್ಬಳ್ಳಿ ಸ್ವಾಗತಿಸಿದರು. ಪೂಜಾ ಶೀಲವಂತರ ಕಾರ್ಯಕ್ರಮವನ್ನು ನಿರೂಪಿಸಿದರು. ಭೀಮಪ್ಪ ಅಣ್ಣಿಗೇರಿ ವಂದಿಸಿದರು.

ಅಂತಾರಾಷ್ಟ್ರೀಯ ಯುವದಿನಾಚರಣೆ ನಿಮಿತ್ತ ಹೆಚ್.ಐ.ವಿ ಏಡ್ಸ್ ಮತ್ತು ರಕ್ತದಾನದ ಕುರಿತು ಇ-ಕ್ವಿಜ್ ಸ್ಪರ್ಧೆಯಲ್ಲಿ ಪ್ರತಿಭಾ ರಾಬಜ್ಜನವರ ಹಾಗೂ ಮಂಜುಳಾ ಪರಾಪೂರ ಪ್ರಥಮ, ಆಫ್ರೀನ್ ಹೊಸಳ್ಳಿ, ಮೀನಾಕ್ಷಿ ಹೊಸಕೇರಿ ಹಾಗೂ ಸಂಕಲ್ಪಿತಾ ಕೋಲ್ಕರ ದ್ವಿತೀಯ, ಪ್ರಮೋದ ಕಪ್ಲಿ ಹಾಗೂ ಕ್ಯಾದಗಿಹಳ್ಳಿ ಕೋಟೆಪ್ಪ ತೃತೀಯ ಸ್ಥಾನ ಗಳಿಸಿದರು. ವಿಜೇತರಿಗೆ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರಗಳನ್ನು ವಿತರಿಸಲಾಯಿತು.

## ಸ್ವಾತಂತ್ರ್ಯ ದಿನಾಚರಣೆ: ವಿಶೇಷ ಸಾರಿಗೆ ಕಾರ್ಯಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2024ನೇ ಸಾಲಿನ ಸ್ವಾತಂತ್ರ್ಯ ದಿನಾಚರಣೆ ಮತ್ತು ವಾರಾಂತ್ಯ ರಜೆಗಳ ಪ್ರಯುಕ್ತ ಸಾರ್ವಜನಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ, ವಾ.ಕ.ರ.ಸಾ.ಸಂಸ್ಥೆಯ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 50 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

ಆಗಸ್ಟ್ 15 ರಂದು ಗುರುವಾರ ಸ್ವಾತಂತ್ರ್ಯ ದಿನಾಚರಣೆ, ಆಗಸ್ಟ್ 16 ರಂದು ಶುಕ್ರವಾರ ವರ ಮಹಾಲಕ್ಷ್ಮಿ ಹಬ್ಬ ಮತ್ತು ಆಗಸ್ಟ್ 17 ಮತ್ತು 18 ರಂದು ವಾರಾಂತ್ಯವಾದ ಶನಿವಾರ ಮತ್ತು ಭಾನುವಾರ ಹಾಗೂ ಆಗಸ್ಟ್ 19ರಂದು ಸೋಮವಾರ ರಕ್ಷಾ ಬಂಧನ ಹಬ್ಬವಿರುವುದರಿಂದ ಬೆಂಗಳೂರು ಮತ್ತು ಇತರೇ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ತಮ್ಮ ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುವುದು. ಬೆಂಗಳೂರಿನಿಂದ ರಾಜ್ಯ/ ಬೇರೆ ರಾಜ್ಯದ ವಿವಿಧ ಸ್ಥಳಗಳಿಗೆ ತೆರಳಲು ಆಗಸ್ಟ್ 14ರಿಂದ ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ.

ಹಬ್ಬ ಮುಗಿದ ಮೇಲೆ ಆಗಸ್ಟ್ 18ರಂದು ಮತ್ತು ನಂತರದ ದಿನಗಳಂದು ಪ್ರಮುಖ ಸ್ಥಳಗಳಿಂದ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುವುದು.

ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಂಸ್ಥೆಯ ಬಸ್‌ಗಳಲ್ಲಿ ಪ್ರಯಾಣಿಸುವಂತೆ ಮತ್ತು ವಿಶೇಷ ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡೆದುಕೊಳ್ಳುವಂತೆ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಪ್ರಕಟಣೆಯಲ್ಲಿ ತಿಳಿಸಿದೆ.

## ವಿಶ್ವ ಸ್ತನ್ಯಪಾನ ಜಾಗೃತಿ ಸಪ್ತಾಹ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಇನ್ನರ್‌ವೀಲ್ ಸಂಸ್ಥೆಯು ಲಕ್ಷ್ಮೇಶ್ವರದ ಪ್ರಾಥಮಿಕ ಆರೋಗ್ಯ ಸಮುದಾಯ ಕೇಂದ್ರದ ಸಹಕಾರದೊಂದಿಗೆ ಸೋಮವಾರ ವಿಶ್ವ ಸ್ತನ್ಯಪಾನ ಜಾಗೃತಿ ಸಪ್ತಾಹ ಆಚರಿಸಲಾಯಿತು. ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ. ಶ್ರೀಕಾಂತ್‌ಸಿಂಗ್ ಕಾಟೇವಾಲೆ ಮಾತನಾಡಿ, ಮಗುವಿಗೆ ತಾಯಿ ಎದೆಹಾಲು ಅಮೃತಕ್ಕೆ ಸಮಾನ. ಹೆರಿಗೆ ನಡುವೆ ನಿಯಮಿತ ಅಂತರವಿದ್ದರೆ ಮಗುವಿಗೆ ಅಗತ್ಯ ಎದೆಹಾಲು ಕೊಡಲು ಸಾಧ್ಯವಾಗುತ್ತದೆ ಎಂದರು.



ಮಕ್ಕಳ ತಜ್ಞ ಶಶಿಕಿರಣ ಹೊಸಮನಿ ಸ್ತನ್ಯಪಾನದ ಮಹತ್ವದ ಬಗ್ಗೆ ಉಪನ್ಯಾಸ ನೀಡಿದರು. ತಾಯಂದಿರು, ಅಂಗನವಾಡಿ ಕಾರ್ಯಕರ್ತೆಯರು, ಆರೋಗ್ಯ ಕೇಂದ್ರದ ಸಿಬ್ಬಂದಿಗಳು ಪಾಲ್ಗೊಂಡಿದ್ದರು. ಈ ವೇಳೆ ವೈದ್ಯರತ್ನ ಪ್ರಶಸ್ತಿಗೆ ಭಾಜನರಾದ ಡಾ. ಶ್ರೀಕಾಂತ್‌ಸಿಂಗ್ ಕಾಟೇವಾಲೆ ಅವರನ್ನು ಸನ್ಮಾನಿಸಲಾಯಿತು. ಸಂಸ್ಥೆಯ ಅಧ್ಯಕ್ಷೆ ರೇಖಾ ವಡಕಣ್ಣವರ, ಉಪಾಧ್ಯಕ್ಷೆ ಮಂಜುಳಾ ಸತ್ಯಪ್ಪನವರ, ಸುಲೋಚನಾ ಜವಾಯಿ, ಮಾಲಾದೇವಿ ದಂದರಗಿ, ನಿರ್ಮಲಾ ಅರಳಿ, ಕಾವ್ಯಾ ದೇಸಾಯಿ ಮುಂತಾದವರಿದ್ದರು.

## ಸೆ.15ರಂದು ಸಾಮೂಹಿಕ ವಿವಾಹ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಅನ್ನದಾನೀಶ್ವರ ಶಾಖಾ ಮಠದಲ್ಲಿ ಶ್ರಾವಣ ಮಾಸದ ಅಂಗವಾಗಿ ಹಮ್ಮಿಕೊಂಡಿರುವ ಶರಣರ ತತ್ವಚಿಂತನ ಪ್ರವಚನ ಮಂಗಲೋತ್ಸವದ ನಿಮಿತ್ತ ಸಾಮೂಹಿಕ ವಿವಾಹ ಕಾರ್ಯಕ್ರಮವನ್ನು ಸೆಪ್ಟೆಂಬರ್ 15ರಂದು ಹಮ್ಮಿಕೊಳ್ಳಲಾಗಿದೆ.

ವಿವಾಹ ಮಾಡಿಕೊಳ್ಳಲು ಇಚ್ಛಿಸುವ ವಧು-ವರರು ಸೆಪ್ಟೆಂಬರ್ 3ರ ಒಳಗಾಗಿ ಶ್ರೀಮಠದಲ್ಲಿ ಹೆಸರು ನೋಂದಾಯಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ-9902695346, 8095268246 ಸಂಪರ್ಕಿಸಲು ಅನ್ನದಾನೀಶ್ವರ ಸೇವಾ ಸಮಿತಿಯ ಅಧ್ಯಕ್ಷ ಮಾರ್ಕಂಡೆಪ್ಪ ಗಡ್ಡದ ತಿಳಿಸಿದ್ದಾರೆ.

## ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2024-2025ನೇ ಶೈಕ್ಷಣಿಕ ಸಾಲಿಗೆ ಬೆಟಗೇರಿಯ ನರಸಾಪೂರದ ಸರ್ಕಾರಿ ಪಾಲಿಟೆಕ್ನಿಕ್ ನಲ್ಲಿ ಎಸ್.ಎಸ್.ಎಲ್.ಸಿ ಹಾಗೂ ತತ್ಸಮಾನ ಪರೀಕ್ಷೆಯಲ್ಲಿ ಪಾಸಾದ ಅರ್ಹ ಅಭ್ಯರ್ಥಿಗಳಿಂದ ಖಾಲಿ ಇರುವ ಮೊದಲ ವರ್ಷದ ಡಿಪ್ಲೋಮಾ ಸೀಟ್ ಗಳಿಗೆ ಹಾಗೂ ಐ.ಟಿ.ಐ/ಪಿ.ಯು.ಸಿ (ವಿಜ್ಞಾನ) ಪಾಸಾದ ವಿದ್ಯಾರ್ಥಿಗಳಿಗೆ 3ನೇ ಸೆಮಿಸ್ಟರ್ ಲ್ಯಾಟ್‌ರಲ್ ಎಮ್ ಟಿ ಸೀಟುಗಳಿಗೆ ಪ್ರಾಂಶುಪಾಲರ ಹಂತದಲ್ಲಿ ಆಫ್‌ಲೈನ್ ಮೂಲಕ ಮೆರಿಟ್ ಹಾಗೂ ರೋಸ್ಟರ್ ಆಧಾರದ ಮೇರೆಗೆ ಡಿಪ್ಲೋಮಾ ಪ್ರವೇಶ ಪಡೆಯಲು ಆಗಸ್ಟ್ 23 ರವರಗೆ ಅಂತಿಮ ದಿನಾಂಕ ವಿಸ್ತರಿಸಲಾಗಿದೆ ಎಂದು ಸರ್ಕಾರಿ ಪಾಲಿಟೆಕ್ನಿಕ್ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಿ.ಸಿ ರಸ್ತೆ ಕಾಮಗಾರಿಯ ಭೂಮಿ ಪೂಜೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವಾರ್ಡ್ ನಂ. 13ರಲ್ಲಿ ನಗರಸಭೆಯ ಅನುದಾನದಲ್ಲಿ ವಕೀಲಚಾಳ ಭಾಗದ 8 ಲಕ್ಷ ರೂ ವೆಚ್ಚದಲ್ಲಿ ಡಾ. ಗೋಡಖಿಂಡಿಯವರ ಮನೆಯಿಂದ ಪೋತ್ನಿಸ್‌ರವರ ಮನೆಯವರೆಗೆ ಸಿ.ಸಿ ರಸ್ತೆಯ ಭೂಮಿ ಪೂಜೆಯನ್ನು ವಿ.ಪ ಸದಸ್ಯರಾದ ಎಸ್.ವ್ಹಿ. ಸಂಕನೂರ ನೆರವೇರಿಸಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯರಾದ ಮುತ್ತು ಮುಶಿಗೇರಿ, ಡಾ. ಕುಶಾಲ ಗೋಡಖಿಂಡಿ, ಡಾ. ಸುರೇಶ ಮಳ್ಳೂರ, ಡಾ. ವಿನಯ ಜೋಶಿ, ಗಿರೀಶ ಕುಲಕರ್ಣಿ, ದೀಪಕ ಪೈ, ಗಣೇಶ ನಾಯರಿ, ಶರಣಪ್ಪ ಇಟಗಿ, ಗಂಗಾವತಿ, ಸುರೇಶ, ವೇರ್ಣೇಕರ, ಶ್ರೀಮತಿ ಶೃತಿ ಮುತ್ತು ಮುಶಿಗೇರಿ, ಜಯಶ್ರೀ ಅಣ್ಣಿಗೇರಿ, ಕಲ್ಯಾಣಿ ಕಿರೇಸೂರ, ವಿದ್ಯಾ ಮೊರಬ, ಉಷಾ ಮೊರಬ, ಗಿರಿಜಾ ಶಿಂಧೆ ಉಪಸ್ಥಿತರಿದ್ದರು.

## ವಿದ್ಯಾರ್ಥಿಗಳಿಗೆ ಟೈ-ಬೆಲ್ಟ್ ವಿತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿಯ ಸಮೀಪದ ಅಡವಿಸೋಮಾಪೂರ ಸಣ್ಣ ತಾಂಡೆ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಗೆ ಗದುಗಿನ ಗಣ್ಯ ವರ್ತಕ ಅಶೋಕ ಜೈನ ಇವರು ನೀಡಿದ ಟೈ-ಬೆಲ್ಟ್ ವಿತರಣೆ ಮಾಡಲಾಯಿತು.



ಶಾಲಾ ಮುಖ್ಯ ಶಿಕ್ಷಕ ಮಲ್ಲೇಶ ಡಿ.ಎಚ್, ಶಿಕ್ಷಕರಾದ ಎಸ್.ಜಿ. ಅಮ್ಮಿನಭಾವಿ, ಎಸ್.ಟಿ. ಹಳಕಟ್ಟಿ, ಪಿ.ಬಿ. ಕಿಲಬನವರ, ಎಸ್‌ಡಿಎಂಸಿ ಅಧ್ಯಕ್ಷ ಮಾರುತಿ ಪವಾರ, ಗ್ರಾಮ ಪಂಚಾಯಿತಿ ಸದಸ್ಯ ವೆಂಕಟೇಶ್ ಲಮಾಣಿ ದಾನಿಗಳಿಗೆ ಅಭಿನಂದನೆಗಳನ್ನು ಸಲ್ಲಿಸಿದರು. ರಾಮಪ್ಪ ಲಮಾಣಿ, ಅಡುಗೆ ಸಿಬ್ಬಂದಿಗಳಾದ ಸಾವಿತ್ರಿ ರಾಠೋಡ, ಗಂಗವ್ವ ಲಮಾಣಿ, ದೇವಕ್ಕ ಲಮಾಣಿ, ರಾಮವ್ವ ಲಮಾಣಿ ಮುಂತಾದವರು ಉಪಸ್ಥಿತರಿದ್ದರು.

## ಯಾರ ಕೊರಳಿಗೆ ವಿಜಯದ ಮಾಲೆ?

▶▶ಮೊದಲನೇ ಪುಟದಿಂದ

ಪಟ್ಟಣದ ಪುರಸಭೆಯ ಕೊನೆಯ 14 ತಿಂಗಳ ಅವಧಿಗೆ ನಡೆಯಲಿರುವ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ಸುಭಾಸ ಮ್ಯಾಗೇರಿ, ಯಮನೂರ ತಿಕರೋಜಿ ಹಾಗೂ ಸುಜಾತಾ ಶಿಂಗ್ರಿ ಪ್ರಮುಖ ರೇಸ್‌ನಲ್ಲಿದ್ದಾರೆ. ಆದರೆ ವಿಜಯಾ ಮಳಗಿ, ಉಮಾ ಮ್ಯಾಕಲ್, ದ್ರಾಕ್ಷಾಯಿಣಿ ಚೋಳಿನ ಸಹ ಆಕ್ಷಾಂಕ್ಷಿಗಳಾಗಿದ್ದರೆ 9ನೇ ವಾರ್ಡಿನ ಕೌಸರಬಾನು ಹುನಗುಂದ ತಾವು ಪುರಸಭೆ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನದ ಆಕಾಂಕ್ಷಿಯಲ್ಲ ಎಂದಿರುವುದರ ಹಿಂದಿನ ಕಾರಣವು ಕುತೂಹಲಕ್ಕೆ ಕಾರಣವಾಗಿದೆ.

ಪಟ್ಟಣದ ಪುರಸಭೆ ಅಧ್ಯಕ್ಷ ಸ್ಥಾನವು ಸಾಮಾನ್ಯ ಎಂದು ಪ್ರಕಟವಾಗಿರುವ ಪರಿಣಾಮ ಬಿಜೆಪಿ 18 ಸದಸ್ಯರಲ್ಲಿ ಹಿಂದಿನ ಪುರಸಭೆ ಸ್ಥಾಯಿ ಸಮಿತಿ ಚೇರಮನ್ ಸ್ಥಾನ, ಪುರಸಭೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೇರಿದ್ದ 4 ಸದಸ್ಯರು ಪ್ರಸ್ತುತ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನದ ರೇಸ್‌ನಿಂದ್ ಹೊರಬಿದ್ದಿದ್ದಾರೆ ಎನ್ನುವ ಚರ್ಚೆಗಳಿವೆ. ಹೀಗಾಗಿ ಇನ್ನುಳಿದ 14 ಸದಸ್ಯರ ಪೈಕಿ ಪುರಸಭೆ ಅಧ್ಯಕ್ಷ ಸ್ಥಾನವು ಸಾಮಾನ್ಯ ಇರುವುದರಿಂದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ 7 ಸದಸ್ಯರಿಗೆ ನೀಡುವ ಸಾಧ್ಯತೆಗಳು ವಿರಳ ಎನ್ನಲಾಗುತ್ತಿದೆ. ಪರಿಣಾಮ ಇನ್ನುಳಿದ 7 ಸದಸ್ಯರಲ್ಲಿ 3 ತೀವ್ರ ಪೈಪೋಟಿ ನಡೆಸಿದ್ದು, ರಾಜಕೀಯ ಲೆಕ್ಕಾಚಾರದಲ್ಲಿ ಮುಳಗಿದ್ದಾರೆ.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸಕ್ತ ಸಾಲಿನಲ್ಲಿ ಗದಗ ಜಿಲ್ಲೆಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕ/ ಬಾಲಕಿಯರ ವಸತಿ ನಿಲಯಗಳಲ್ಲಿ ಸಾಮಾನ್ಯ ಪದವಿ ಮಟ್ಟದ ಕೋರ್ಸಿನ ವಿದ್ಯಾರ್ಥಿಗಳ ಪ್ರವೇಶಕ್ಕಾಗಿ ಎಸ್‌ಎಚ್‌ಪಿ (ಸ್ಟೇಟ್ ಹಾಸ್ಟೆಲ್ ಪೋರ್ಟಲ್) ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಪೋಷಕರು/ವಿದ್ಯಾರ್ಥಿಗಳು ವೆಬ್‌ಸೈಟ್ ವಿಳಾಸ https://shp.karnataka.gov.in ಮೂಲಕ ಸೆಪ್ಟೆಂಬರ್ 12 ರೊಳಗಾಗಿ ಸಲ್ಲಿಸಿ ಅರ್ಜಿ ಪ್ರತಿ ಹಾಗೂ ಎಲ್ಲ ದಾಖಲೆಗಳನ್ನು ಸಂಬಂಧಿಸಿದ ವಸತಿ ನಿಲಯಗಳಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಗದಗ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಿಧನ ವಾರ್ತೆ

### ಸೋಮಣ್ಣ ವೀರಭದ್ರಪ್ಪ ಮುಳಗುಂದ



ಲಕ್ಷ್ಮೇಶ್ವರ: ಪಟ್ಟಣದ ಸೊಪ್ಪಿನಕೇರಿ ಓಣಿಯ ಹಿರಿಯರು, ಪಂಚಮಸಾಲಿ ಸಮಾಜದ ಮುಖಂಡ ಸೋಮಣ್ಣ ವೀರಭದ್ರಪ್ಪ ಮುಳಗುಂದ (80) ಮಂಗಳವಾರ ನಿಧನರಾದರು. ಮೃತರಿಗೆ ಪತ್ನಿ, ಮೂವರು ಪುತ್ರರು ಸೇರಿ ಅಪಾರ ಬಂಧು-ಬಳಗವಿದೆ.

### ಹಾಲಕೆರೆಯಲ್ಲಿ ಬೆಳ್ಳಿ ರಥಕ್ಕೆ ಚಾಲನೆ ನೀಡಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

## ಬೆಳ್ಳಿ ರಥೋತ್ಸವ ಭಕ್ತರ ಭಾಗ್ಯ

■ವಿಜಯಸಾಕ್ಷಿ ಸುದ್ದಿ, ನರೇಗಲ್

ಹಾಲಕೆರೆಯ ಶ್ರೀ ಅನ್ನದಾನೇಶ್ವರ ಮಠ ಈ ಭಾಗದ ಶೃದ್ಧಾ-ಭಕ್ತಿಯ ಕೇಂದ್ರವಾಗಿದೆ. ಇಲ್ಲಿನ ಲಿಂ. ಡಾ. ಅಭಿನವ ಅನ್ನದಾನ ಮಹಾಸ್ವಾಮಿಗಳವರು ಪವಿತ್ರ ಮಾಸವಾಗಿರುವ ಶ್ರಾವಣದಲ್ಲಿ ಮಹಿಳೆಯರಿಗೆಂದೇ ಒಂದು ವಿಶೇಷ ಕಾರ್ಯಕ್ರಮವನ್ನು ನೀಡಬೇಕೆನ್ನುವ ಹಿನ್ನೆಲೆಯಲ್ಲಿ ಬೆಳ್ಳಿ ರಥೋತ್ಸವದ ಕಲ್ಪನೆಯನ್ನು ಜಾರಿಗೆ ತಂದರು. ಪ್ರತಿ ವರ್ಷದ ಶ್ರಾವಣ ಮಾಸದ ಎರಡನೇ ಸೋಮವಾರ ಈ ರಥೋತ್ಸವ ನಡೆಸಬೇಕೆನ್ನುವ ಮೇಲ್ಪಂಕ್ತಿಯನ್ನು ಹಾಕಿಕೊಟ್ಟರು ಎಂದು ರಾಜ್ಯದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಸಮೀಪದ ಹಾಲಕೆರೆ ಗ್ರಾಮದಲ್ಲಿ ಎರಡನೇ ಶ್ರಾವಣ ಸೋಮವಾರದ ನಿಮಿತ್ತ ಜರುಗಿದ ಸಮಾರಂಭದಲ್ಲಿ ಬೆಳ್ಳಿ ರಥೋತ್ಸವಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



ಇಂದಿನ ಪೀಠಾಧಿಪತಿಗಳಾಗಿರುವ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರು ಈ ಕಾರ್ಯವನ್ನು ಮುನ್ನಡೆಸಿ ಕೊಂಡು ಬರುತ್ತಿರುವುದು ಸಮಸ್ತ ಭಕ್ತರ ಭಾಗ್ಯವಾಗಿದೆ. ಈ ರಥೋತ್ಸವದಲ್ಲಿ ಬೆಳ್ಳಿಯ ತೇರನ್ನು ಮಹಿಳೆಯರೇ ಎಳೆಯುವುದು ಅತ್ಯಂತ ವಿಶೇಷವಾಗಿದೆ. ಈ ಸಮಯದಲ್ಲಿ ಮಹಿಳೆಯರ ಹುರುಪು-ಹುಮ್ಮಸ್ಸುಗಳನ್ನು ನೋಡುವುದೇ ಒಂದು ಸೊಗಸು ಎಂದರು.

ಸೋಮವಾರ ಸಂಜೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ರಥೋತ್ಸವಕ್ಕೆ ಚಾಲನೆ ನೀಡಲು ಬರುತ್ತಿದ್ದಂತೆ ನೆರೆದ ಮಹಿಳೆಯರ ಮತ್ತು ಪುರುಷರ ಉತ್ಸಾಹ ನೂರ್ಮಡಿಯಾಯಿತು. ಶ್ರೀಮಠದ ಪೀಠಾಧಿಪತಿಗಳಾಗಿರುವ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಮತ್ತು ನಾಡಿನ ಇತರೆ ಭಾಗದಿಂದ ಆಗಮಿಸಿದ್ದ ಅನೇಕ ಹರ-ಗುರು-ಚರ ಮೂರ್ತಿಗಳ ಸಾನ್ನಿಧ್ಯದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಬೆಳ್ಳಿ ರಥೋತ್ಸವಕ್ಕೆ ಚಾಲನೆ ನೀಡಿದರು.

ಹಾಲಕೆರೆ ಮಾತ್ರವಲ್ಲದೆ ಸುತ್ತಲಿನ ಗ್ರಾಮಗಳಾದ ನರೇಗಲ್ಲ, ಜಕ್ಕಲಿ, ಕರಮುಡಿ, ಗಜೇಂದ್ರಗಡ, ನಿಡಗುಂದಿ, ರೋಣ ಮತ್ತು ಪಕ್ಕದ ಜಿಲ್ಲೆಗಳಾದ ಕೊಪ್ಪಳ, ಬಾಗಲಕೋಟೆ ಮುಂತಾದ ಜಿಲ್ಲೆಗಳಿಂದಲೂ ಮಹಿಳಾ ಭಕ್ತರು ಆಗಮಿಸಿ ರಥೋತ್ಸವದಲ್ಲಿ ಪಾಲ್ಗೊಂಡದ್ದು ವಿಶೇಷವಾಗಿತ್ತು.



ಚಿತ್ರದುರ್ಗ ಜಿಲ್ಲೆಯ ಸಿರಿಗೆರೆ ಪಟ್ಟಣದ ತರಳುಬಾಳು ಜಗದ್ಗುರು ಬೃಹನಠದಲ್ಲಿ 19ನೇ ತರಳುಬಾಳು ಜಗದ್ಗುರು 1108 ಗುರುಶಾಂತರಾಜ ದೇಶಿಕೇಂದ್ರ ಮಾಹಾಸ್ವಾಮಿಗಳವರ ಶ್ರದ್ಧಾಂಜಲಿಯ ಪ್ರಯುಕ್ತ ಆ.10ರಂದು ಜರುಗಿದ ರಾಜ್ಯ ಮಟ್ಟದ ವೀರಗಾಸೆ ಸ್ಪರ್ಧೆಯಲ್ಲಿ ಮುಳಗುಂದದ ವೀರಭದ್ರೇಶ್ವರ ಪುರವಂತರ ಸಮ್ಮಾಳ ಮೇಳದವರು ಭಾಗವಹಿಸಿ ತೃತೀಯ ಸ್ಥಾನ ಪಡೆದಿದ್ದಾರೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಮಾಹಿತಿ

# ಕ್ಷುಲ್ಲಕ ಕಾರಣಕ್ಕೆ ವ್ಯಕ್ತಿಯ ಕೊಲೆ



■ವಿಜಯಸಾಕ್ಷಿ ಸುದ್ದಿ, ನರೇಗಲ್

ಸಮೀಪದ ಜಕ್ಕಲಿ ಗ್ರಾಮದಲ್ಲಿ ಕ್ಷುಲ್ಲಕ ಕಾರಣಕ್ಕೆ ವ್ಯಕ್ತಿಯೋರ್ವನ ಕೊಲೆ ನಡೆದಿದೆ. ಕೊಲೆಯಾದ ವ್ಯಕ್ತಿ ಬಸಪ್ಪ ಮುಕ್ಕಣ್ಣವರ ಮಂಗಳವಾರ ಬೆಳಿಗ್ಗೆ 8.30ಕ್ಕೆ ಚಿಕಿತ್ಸೆ ಫಲಿಸದೆ ಹುಬ್ಬಳ್ಳಿಯ ಕಿಮ್ಸ್‌ನಲ್ಲಿ ಸಾವೀಗೀಡಾಗಿದ್ದಾನೆ ಎಂದು ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಹೇಳಿದರು.

ಘಟನೆಯ ಕುರಿತು ನರೇಗಲ್ಲ ಪೊಲೀಸ್ ಠಾಣೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮನೆಯ ಮುಂದಿನ ರಸ್ತೆಯಲ್ಲಿ ಹಾಕಿದ್ದ ಹೆಸರಿನ ರಾಶಿಯನ್ನು ತೆಗೆದು ನನ್ನ ಕಾರು ಹೋಗಲು ಅನುಕೂಲ ಮಾಡಿಕೊಡಿ ಎಂದು ಆರೋಪಿ ಯಲ್ಲಪ್ಪ ಫಕೀರಪ್ಪ ಕುರಿ ಬಸಪ್ಪ ಮುಕ್ಕಣ್ಣವರ ಅವರಿಗೆ ಹೇಳಿದ್ದಾನೆ. ಅವರೂ ಸಹ ತೆಗೆಯಲು ಒಪ್ಪಿಕೊಂಡು ತೆಗೆಯುವ ಅವಸರದಲ್ಲಿದ್ದಾಗ ಆರೋಪಿ ಯಲ್ಲಪ್ಪ ಅವರೊಂದಿಗೆ ಕ್ಯಾತೆ ತೆಗದು ಜಗಳಕ್ಕೆ ನಿಂತಿದ್ದಾನೆ. ಮಾತಿಗೆ ಮಾತು ಬೆಳೆದು ಕೈಕೈ ಮಿಲಾಯಿಸುವ ಹಂತಕ್ಕೆ ಹೋಗಿದೆ. ಜಗಳವನ್ನು ಬಿಡಿಸಲು ಬಸಪ್ಪನ ಹೆಂಡತಿ ಹನುಮವ್ವನೂ ಬಂದಿದ್ದಾಳೆ. ಯಾರ ಮಾತನ್ನೂ ಕೇಳದ ಸ್ಥಿತಿಯಲ್ಲಿ ಇಲ್ಲದಿದ್ದ ಯಲ್ಲಪ್ಪ ಕೈಗೆ ಸಿಕ್ಕ ಕಬ್ಬಿಣದ ರಾಡ್‌ನಿಂದ ಬಸಪ್ಪನ ತಲೆಗೂ, ಹನುಮವ್ವಳ ಕಾಲಿಗೂ ಜೋರಾಗಿ ಹೊಡೆದಿದ್ದಾನೆ. ಈ ಘಟನೆ ಸೋಮವಾರ ಸಂಜೆ ನಡೆದಿದೆ ಎಂದು ಎಸ್.ಪಿ. ನೇಮಗೌಡ ಹೇಳಿದರು.

ತೀವ್ರ ಗಾಯಗೊಂಡ ಬಸಪ್ಪನನನ್ನು ಸೋಮವಾರ ರಾತ್ರಿಯೆ ಚಿಕಿತ್ಸೆಗಾಗಿ ಗದಗ ಜಿಲ್ಲಾ ಆಸ್ಪತ್ರೆಗೆ ಸೇರಿಸಲಾಯಿತು. ಅಲ್ಲಿನ ವೈದ್ಯರ ಸೂಚನೆಯ ಮೇರೆಗೆ ಹೆಚ್ಚಿನ ಚಿಕಿತ್ಸೆಗಾಗಿ ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ರವಾನಿಸಲಾಯಿತು. ಅಲ್ಲಿ ಚಿಕಿತ್ಸೆ ಫಲಿಸದೆ ಬಸಪ್ಪ ಮಂಗಳವಾರ ಬೆಳಿಗ್ಗೆ 8.30ಕ್ಕೆ ನಿಧನ ಹೊಂದಿದ್ದಾನೆ. ಮೃತನ ಹೆಂಡತಿ ಹನುಮವ್ವ ಬಸಪ್ಪ ಮುಕ್ಕಣ್ಣವರ ಯಲ್ಲಪ್ಪ ಫಕೀರಪ್ಪ ಕುರಿ, ಫಕೀರಪ್ಪ ಯಲ್ಲಪ್ಪ ಕುರಿ, ಬಾಳವ್ವ ಫಕೀರಪ್ಪ ಕುರಿ ಹಾಗೂ ಶಶಿಕಲಾ ಫಕೀರಪ್ಪ ಕುರಿ ಈ ನಾಲ್ಕೂ ಜನರ ಮೇಲೆ ನೀಡಿದ ದೂರಿನನ್ವಯ ಯಲ್ಲಪ್ಪನನ್ನು ಹೊರತುಪಡಿಸಿ ಮೂವರನ್ನೂ ಈಗಾಗಲೇ ವಶಕ್ಕೆ ಪಡೆಯಲಾಗಿದೆ.

ನರೇಗಲ್ಲ ಪಿಎಸ್‌ಐ ಐಶ್ವರ್ಯ ನಾಗರಾಳ ಪ್ರಕರಣವನ್ನು ದಾಖಲಿಸಿಕೊಂಡಿದ್ದು, ತನಿಖೆಯನ್ನು ಮುಂದುವರೆಸಿದ್ದಾರೆ. ಜಕ್ಕಲಿ ಗ್ರಾಮಕ್ಕೆ ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಡಿವೈಎಸ್ಪಿ ಪ್ರಭುಗೌಡ, ರೋಣ ಸಿಪಿಐ ಎಸ್.ಎಸ್. ಬೀಳಗಿ ಭೇಟಿ ನೀಡಿ ಪರಿಶೀಲಿಸಿದರು.

ಮೊದಲ ಆರೋಪಿ ಯಲ್ಲಪ್ಪ ಫಕೀರಪ್ಪ ಕುರಿ ಚಿಕಿತ್ಸೆಗೆಂದು ಗದಗ ಜಿಲ್ಲಾ ಆಸ್ಪತ್ರೆಗೆ ದಾಖಲಾಗಿರುವದರಿಂದ ನಂತರ ಅವನನ್ನು ವಶಕ್ಕೆ ಪಡೆಯಲಾಗುವುದು. ಅಕ್ಕಪಕ್ಕದ ಮನೆಯವರಾದ ಇವರು ಚಿಕ್ಕಪುಟ್ಟ ಕಾರಣಕ್ಕೂ ಮೇಲಿಂದ ಮೇಲೆ ಜಗಳವಾಡುತ್ತಿದ್ದರು. ಸೋಮವಾರ ಜಗಳ ವಿಕೋಪಕ್ಕೆ ಹೋಗಿ ಹೆಸರಿನ ರಾಶಿ ತೆಗೆಸುವ ನೆಪದಲ್ಲಿ ಈ ಕೊಲೆ ನಡೆದಿದೆ ಎಂದು ಎಸ್ಪಿ ನೇಮಗೌಡ ತಿಳಿಸಿದರು.

ಹಾಲಕೆರೆಯ ಶಿವಾನುಭವಗೋಷ್ಠಿ ಕಾರ್ಯಕ್ರಮದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

# ಮಠಗಳು ಸಂಸ್ಕೃತಿಯನ್ನು ಧಾರೆ ಎರೆದಿವೆ

■ವಿಜಯಸಾಕ್ಷಿ ಸುದ್ದಿ, ನರೇಗಲ್

ನಮ್ಮ ನಾಡಿನಲ್ಲಿ ಮಠಗಳು ಮತ್ತು ಮಠಾಧೀಶರು ಸಮಾಜದ ಉದ್ಧಾರಕ್ಕಾಗಿ ಅನೇಕ ಕಾರ್ಯಗಳನ್ನು ಮಾಡುತ್ತಿದ್ದಾರೆ. ಈ ಕಾರ್ಯಗಳ ಮೂಲಕ ಅವರು ಭಕ್ತ ಸಮೂಹದಲ್ಲಿ ಸಂಸ್ಕೃತಿಯನ್ನು ಧಾರೆ ಎರೆದಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಸಮೀಪದ ಹಾಲಕೆರೆ ಗ್ರಾಮದಲ್ಲಿ ಶ್ರಾವಣ ಮಾಸದ 2ನೇ ಸೋಮವಾರ ಬೆಳ್ಳಿ ರಥಕ್ಕೆ ಚಾಲನೆ ನೀಡಿದ ನಂತರ ನಡೆದ ಶಿವಾನುಭವಗೋಷ್ಠಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.




ಹಿರಿಯರನ್ನು ಗೌರವಿಸುವ ಗುಣ ನಮ್ಮ ಸಂಸ್ಕೃತಿಯಲ್ಲಿಯೇ ಇದೆ. ಇನ್ನೂ ನೂರು ವರ್ಷಗಳ ಕಾಲ ನಮ್ಮ ಸಂಸ್ಕೃತಿಗೆ ಯಾರಿಂದಲೂ ಯಾವುದೇ ಧಕ್ಕೆ ಇಲ್ಲ. ಭಾರತದ ಸಂಸ್ಕೃತಿ ಅದ್ವಿತೀಯವಾದದ್ದು. ಈ ಸಂಸ್ಕೃತಿಯನ್ನು ನಮಗೆ ನೀಡಿದವರು ಮಠಾಧೀಶರು. ಈ ಸಂಸ್ಕೃತಿಗಾಗಿಯೆ ಇಡೀ ಜಗತ್ತು ನಮ್ಮ ಕಡೆಗೆ ನೋಡುತ್ತಿದೆ. ಇದು ಭಾರತದ ಹೆಮ್ಮೆ ಎಂದು ಹೆಬ್ಬಾಳ್ಕರ್ ನುಡಿದರು.

ಸಂಸ್ಕೃತಿ ಕೇವಲ ಹೆಂಗಸರಿಗೆ ಮಾತ್ರ ಸೀಮಿತವಲ್ಲ. ಗಂಡಸರೂ ಸಹ ಸಂಸ್ಕೃತಿಯನ್ನು ಕಲಿಯಬೇಕು. ಹೆಣ್ಣನ್ನು ಕೆಟ್ಟ ದೃಷ್ಟಿಯಿಂದ ನೋಡುವುದನ್ನು ಬಿಡಬೇಕು. ಮಹಿಳೆಯರು ಆರ್ಥಿಕ ಸ್ವಾವಲಂಬನೆಯನ್ನು ಬೆಳೆಸಿಕೊಳ್ಳಬೇಕು. ತಮ್ಮಲ್ಲಿ ಧೈರ್ಯವನ್ನು ಬೆಳೆಸಿಕೊಂಡು ಮುನ್ನುಗ್ಗಿದಾಗ ಹೆಣ್ಣಿಗೆ ಸಿಗಬೇಕಾದ ಗೌರವಗಳು ಸಿಗುತ್ತವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ನೀಲಗುಂದದ ಪ್ರಭುಲಿಂಗ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಲಿಂಗ ಪೂಜೆಯಿಂದ ಜಗದ ಹಂಗು ಹರಿಯುತ್ತದೆ. ಲಿಂಗ ಪೂಜೆ ಎಂದರೆ ಲಿಂಗದಲ್ಲಿ ನಮ್ಮನ್ನು ನಾವು ನೋಡಿಕೊಳ್ಳುವುದೆಂದರ್ಥ. ಸ್ವಾರ್ಥದ ಚಿಂತೆ ಇಲ್ಲದವರಿಗೆ ಪರಾರ್ಥದ ಚಿಂತೆ-ಯೂ ಬರುವುದಿಲ್ಲ. ಆದ್ದರಿಂದ ನೀವು ನಿಮ್ಮ ನಿತ್ಯದ ಬದುಕಿನೊಂದಿಗೆ ಆಧ್ಯಾತ್ಮದ ಒಲವನ್ನೂ ಬೆಳೆಸಿಕೊಳ್ಳಿ ಎಂದು ಹೇಳಿದರು.

ಶಿವಾನುಭಗೋಷ್ಠಿಯ ದಿವ್ಯ ಸಾನ್ನಿಧ್ಯವನ್ನು ವಳಬಳ್ಳಾರಿಯ ಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳು ವಹಿಸಿದ್ದರು. ನೇತೃತ್ವವನ್ನು ಸಂತೆಕಲ್ಲೂರಿನ ಶ್ರೀ ಗುರುಬಸವ ಮಹಾಸ್ವಾಮಿಗಳು ವಹಿಸಿದ್ದರು. ವೇದಿಕೆಯ ಮೇಲೆ ನಾಡಿನ ಅನೇಕ ಹರ-ಗುರು-ಚರ ಮೂರ್ತಿಗಳು, ಅನ್ನಪೂರ್ಣಮ್ಮ ಪಾಟೀಲ, ಉಪನ್ಯಾಸಕಿ ವೀಣಾ ಪಾಟೀಲ, ಸಂಯುಕ್ತ ಬಂಡಿ, ಕದಿರಿ ಶ್ರೀರೀತಾ ಮತ್ತು ಹಿರಿಯ ತಾಯಂದಿರು ಉಪಸ್ಥಿತರಿದ್ದರು. ಪ್ರಾಧ್ಯಾಪಕಿ ಡಾ. ರತ್ನಾ ಪಾಟೀಲ ನಿರೂಪಿಸಿದರು. ಮುಖ್ಯ ಶಿಕ್ಷಕಿ ಭಾರತಿ ಶಿರ್ಸಿ ಸ್ವಾಗತಿಸಿದರು. ನಂತರ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಅಂಗ ಸಂಸ್ಥೆಗಳ ಮಕ್ಕಳಿಂದ ಮನರಂಜನಾ ಕಾರ್ಯಕ್ರಮಗಳು ಜರುಗಿದವು.

# ಪೋಷಕಾಂಶಗಳ ನಿರ್ವಹಣೆ ಕುರಿತ ಕೋರ್ಸ್ ಉದ್ಘಾಟನೆ




■ವಿಜಯಸಾಕ್ಷಿ ಸುದ್ದಿ, ಗದಗ

ಮ್ಯಾನೇಜ್-ಹೈದರಾಬಾದ, ಕೃಷಿ ವಿಶ್ವವಿದ್ಯಾಲಯ-ಧಾರವಾಡ, ಕೃಷಿ ಇಲಾಖೆ ಗದಗ ಹಾಗೂ ಐ.ಸಿ.ಎ.ಆರ್-ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ-ಹುಲಕೋಟಿ ಇವರ ಸಹಯೋಗದಲ್ಲಿ ಗದಗ ಜಿಲ್ಲೆಯ ವಿವಿಧ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳ ಕಾರ್ಯದರ್ಶಿಗಳಿಗೆ 15 ದಿನದ ಸಮಗ್ರ ಪೋಷಕಾಂಶಗಳ ನಿರ್ವಹಣೆ ಕುರಿತು ಸರ್ಟಿಫಿಕೇಟ್ ಕೋರ್ಸ್ (ಸಿ.ಸಿ.ಐ.ಎನ್.ಎಮ್)-2ನೇ ತಂಡದ ಉದ್ಘಾಟನೆ ಹಾಗೂ ಮೊದಲನೇ ತಂಡದ ಪ್ರಮಾಣಪತ್ರ ವಿತರಣಾ ಕಾರ್ಯಕ್ರಮವನ್ನು ನಡೆಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಡಾ.ಬಿ.ಡಿ. ಬಿರಾದಾರ, ಮಣ್ಣು ಫಲವತ್ತಾಗಿ ಉಳಿಯಬೇಕಾದರೆ ಮಣ್ಣಿನಲ್ಲಿರುವ ಸೂಕ್ಷ್ಮಾಣುಗಳ ಸಂಖ್ಯೆಯನ್ನು ವೃದ್ಧಿಸಬೇಕಾಗುತ್ತದೆ. ಇದಕ್ಕಾಗಿ ಮಣ್ಣಿನ ಆರೋಗ್ಯವನ್ನು ಕಾಪಾಡುವುದು ಬಹಳ ಮುಖ್ಯ ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಡಾ. ಎಸ್.ಎಸ್. ಅಂಗಡಿ ಮಾತನಾಡಿ, ರೈತರು ಮಣ್ಣನ್ನು ಕಾಪಾಡಲು ಸಾವಯವ ಗೊಬ್ಬರವನ್ನು ಹೆಚ್ಚಾಗಿ ಬಳಕೆ ಮಾಡಬೇಕು ಹಾಗೂ ಕೃಷಿ ತ್ಯಾಜ್ಯಗಳನ್ನು ಮಣ್ಣಿನಲ್ಲಿಯೇ ಕೊಳೆಯುವಂತೆ ಮಾಡಬೇಕು ಎಂದು ಸಂದೇಶ ನೀಡಿದರು.

ಸ್ಫೂರ್ತಿ ಜಿ.ಎಸ್ ಮಾತನಾಡುತ್ತಾ, ಗದಗ ಜಿಲ್ಲೆಯಲ್ಲಿರುವ ಕೃಷಿ ಸಹಕಾರ ಸಂಘಗಳು ರೈತರಿಗೆ ರಸಾಯನಿಕ ಗೊಬ್ಬರಗಳನ್ನು ಮುಟ್ಟಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ. ರೈತರು ಅಗತ್ಯಕ್ಕಿಂತ ಹೆಚ್ಚು ರಸಗೊಬ್ಬರಗಳನ್ನು ಬಳಸುತ್ತಿದ್ದಾರೆ. ಸಹಕಾರ ಸಂಘದ ಕಾರ್ಯದರ್ಶಿಗಳು ಈ ತರಬೇತಿಯಲ್ಲಿ ಮಾಹಿತಿ ಪಡೆದು ರೈತರಿಗೆ ಸಮಗ್ರ ಪೋಷಕಾಂಶಗಳ ನಿರ್ವಹಣೆ ಮಾಡಲು ಸಹಾಯ ಮಾಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ. ಸುಧಾ ವ್ಹಿ. ಮಂಕಣಿ ಮಾತನಾಡಿ, ಮಣ್ಣಿನ ಆರೋಗ್ಯ ವೃದ್ಧಿಯಾಗಲು ಸಮಗ್ರ ಪೋಷಕಾಂಶಗಳ ನಿರ್ವಹಣೆ ಅವಶ್ಯಕ ಎಂದರು. ಎನ್.ಎಚ್. ಭಂಡಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ವಿನಾಯಕ ನಿರಂಜನ್ ನಿರೂಪಿಸಿದರು. ಎಸ್.ಕೆ. ಮುದ್ಲಾಪುರ ವಂದಿಸಿದರು.

# ಪಥಸಂಚಲನಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಅಭಿನಂದನೆ





■ವಿಜಯಸಾಕ್ಷಿ ಸುದ್ದಿ, ಗದಗ

ಸರಕಾರಿ ಪದವಿಪೂರ್ವ ಕಾಲೇಜಿನಲ್ಲಿ ದ್ವಿತೀಯ ಪಿಯುಸಿಯಲ್ಲಿ ಕಲಾ ವಿಭಾಗದಲ್ಲಿ ಓದುತ್ತಿರುವ ಆದಿತ್ಯ ಗೊರವರ ಹಾಗೂ ಸತೀಶ ಕನ್ನೇರ ನವದೆಹಲಿಯ ಕೆಂಪುಕೋಟೆ ಆವರಣದಲ್ಲಿ ದೇಶದ ಹೆಮ್ಮೆಯ ಪ್ರಧಾನಿ ನರೇಂದ್ರಮೋದಿ ಅವರ ಘನ ಉಪಸ್ಥಿತಿಯಲ್ಲಿ ನಡೆಯಲಿರುವ ಸ್ವಾತಂತ್ರ್ಯೋತ್ಸವ ಸಮಾರಂಭದ ಪಥಸಂಚಲನದಲ್ಲಿ ಭಾಗವಹಿಸುವ ಮೂಲಕ ಕರ್ನಾಟಕ ಮತ್ತು ಗದಗ ಜಿಲ್ಲೆಯ ಕೀರ್ತಿ ಪತಾಕೆಯನ್ನು ಹಾರಿಸಲಿದ್ದಾರೆ. ಗದಗ ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರ ವಿದ್ಯಾರ್ಥಿಗಳು ಕೆಂಪುಕೋಟೆಯ ಆವರಣದಲ್ಲಿ ನಡೆಯುವ ಪಥಸಂಚಲನದಲ್ಲಿ ಭಾಗವಹಿಸುತ್ತಿರುವದು ಸಂತಸ ತಂದಿದೆ ಎಂದು ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರವಿ ಗುಂಜೀಕರ ಹಾಗೂ ಗದಗ ತಾಲೂಕು ಅಧಿಕಾರಿಗಳಾಗಿರುವ ಡಾ. ಬಸವರಾಜ ಬಳ್ಳಾರಿ ಸಂತಸ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಈ ವಿದ್ಯಾರ್ಥಿಗಳನ್ನೊಳಗೊಂಡ ಪಥಸಂಚಲನ ನೋಡಿ ಕಣ್ತುಂಬಿಕೊಳ್ಳೋಣ, ಇಂತಹ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವ ಮೂಲಕ ಪ್ರತಿಭಾ ವ್ಯಕ್ತಿತ್ವವನ್ನು ಗೌರವಿಸಿ, ವಿದ್ಯಾರ್ಥಿಗಳ ಉಜ್ವಲ ಭವಿಷ್ಯದ ಬೆಳವಣಿಗೆಗೆ ಆದ್ಯತೆಯನ್ನು ನೀಡಿರುವ ಕೇಂದ್ರ ಸರಕಾರವನ್ನು ಅಭಿನಂಧಿಸಿದ್ದಾರೆ.



ಲಕ್ಷ್ಮೇಶ್ವರ ತಾಲೂಕಿನ ಗೋವನಾಳ ಗ್ರಾಮ ಪಂಚಾಯಿತಿಗೆ 2ನೇ ಅವಧಿಗೆ ಅಧ್ಯಕ್ಷರಾಗಿ ಅಣ್ಣಪ್ಪ ರಾಮಗೇರಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಒಟ್ಟು 8 ಸದಸ್ಯರಿರುವ ಗ್ರಾ.ಪಂ ಚುನಾವಣೆ ಪ್ರಕಿಯೆಯಲ್ಲಿ ಇಬ್ಬರು ಸದಸ್ಯರು ಗೈರಾಗಿದ್ದರು. ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಚುಣಾವಣಾಧಿಕಾರಿ ಕೃಷ್ಣಪ್ಪ ಧರ್ಮರ ಆಯ್ಕೆ ಘೋಷಿಸಿದರು. ಈ ವೇಳೆ ಸದಸ್ಯರು, ಹಿರಿಯರು ಇದ್ದರು.

# ತೋಂಟದ ಶ್ರೀಗಳು ಯುಗಪುರುಷರು

■ವಿಜಯಸಾಕ್ಷಿ ಸುದ್ದಿ, ನರಗುಂದ

ಎಲ್ಲ ಕಾಲಕ್ಕೂ ಹೇಗೆ ಯುಗ ಪುರುಷರು ಇರುತ್ತಾರೆಯೋ ಅದೇ ರೀತಿ ಈಗಿನ ಕಾಲದ ಯುಗ ಪುರುಷರು ಡಾ. ತೋಂಟದ ಸಿದ್ಧಲಿಂಗ ಶ್ರೀಗಳು ಎಂದು ಶಿರೋಳ ತೋಂಟದಾರ್ಯ ಮಠದ ಪೂಜ್ಯ ಶ್ರೀ ಶಾಂತಲಿಂಗ ಮಹಾಸ್ವಾಮಿಗಳು ನುಡಿದರು.



ಅವರು ತಾಲೂಕಿನ ಶಿರೋಳ ಗ್ರಾಮದಲ್ಲಿ ನಡೆದ ಎರಡನೇ ದಿನದ 'ನಮ್ಮ ನಡೆ-ಆಧ್ಯಾತ್ಮದ ಕಡೆ' ಕಾರ್ಯಕ್ರಮದಲ್ಲಿ ಮಾತನಾಡಿದರು.

ಸತತ ಒಂದು ತಿಂಗಳ ಕಾಲ ಮೌನ ಲಿಂಗಾನುಷ್ಠಾನದಲ್ಲಿ ತೊಡಗಿದ್ದ ಶಿರೋಳ ತೋಂಟದಾರ್ಯ ಮಠದ ಪೀಠಾಧಿಪತಿಗಳಾದ ಶಾಂತಲಿಂಗ ಮಹಾಸ್ವಾಮಿಗಳು ಆಗಸ್ಟ್ 5ರಂದು ಮೌನಲಿಂಗಾನುಷ್ಠಾನ ಮಂಗಲೋತ್ಸವ ದಿನ ಡಾ. ಸಿದ್ಧರಾಮ ಮಹಾಸ್ವಾಮಿಗಳಿಂದ "ನಮ್ಮ ನಡೆ ಆಧ್ಯಾತ್ಮದ ಕಡೆ" ಕಾರ್ಯಕ್ರಮವನ್ನು ಉದ್ಘಾಟಿಸಿದ್ದರು. ಎಡೆಯೂರು ಸಿದ್ದಲಿಂಗೇಶ್ವರ ದರ್ಶನ ಪಡೆದು ವಾಪಸಾದ ಬಳಿಕ ಆಗಸ್ಟ್ 10ರಿಂದ ಆಗಸ್ಟ್ 31ರವರೆಗೆ 'ನಮ್ಮ ನಡೆ-ಆಧ್ಯಾತ್ಮದ ಕಡೆ' ಗ್ರಾಮದಲ್ಲಿ ಪಾದಯಾತ್ರೆ ಮೂಲಕ ಸಂಚರಿಸಿ ಜನರನ್ನು ಆಧ್ಯಾತ್ಮ ಚಿಂತನದತ್ತ ಸೆಳೆಯುತ್ತಿದ್ದಾರೆ ಎಂದರು.

ಸವಿತಾ ಹಾದಿಮನಿ ಪ್ರಾರ್ಥನೆ ಹಾಡಿದರು. ಬಾಪುಗೌಡ ತಿಮ್ಮನಗೌಡ್ರ ತೋಂಟದ ಸಿದ್ಧಲಿಂಗ ಶ್ರೀಗಳ ಕುರಿತಾಗಿ ಉಪನ್ಯಾಸವನ್ನು ನೀಡಿದರು. ಸ್ನೇಹಾ ಮುದಕವಿಮಠ, ಕಾವ್ಯ ಜಂಗಿನ, ಶ್ರೇಯಾ ಮುಲ್ಕಿಪಾಟೀಲ ಸೇರಿದಂತೆ ಅನೇಕ ವಿದ್ಯಾರ್ಥಿಗಳು ವಚನ ಗಾಯನ ಮಾಡಿದರು.

ಈ ಸಂದರ್ಭದಲ್ಲಿ ಅಭಿನವ ಎಚ್ಚರಸ್ವಾಮಿಗಳು, ಕಿತ್ತಲಿಯ ಮಂಜುನಾಥ ಸ್ವಾಮಿಗಳು, ಅಕ್ಕಮಹಾದೇವಿ ಅಮ್ಮನವರು, ಹಿರೇಮಠದ ಅಪ್ಪಯ್ಯ ಹಿರೇಮಠ, ರುದ್ರಯ್ಯ ಹಿರೇಮಠ ಸೇರಿದಂತೆ ಬಸವೇಶ್ವರ ದೇವಸ್ಥಾನದ ಈರಣ್ಣ ಮರಿಗುದ್ದಿ, ರವಿ ದೊಡಮನಿ, ಉಮೇಶ ಮರಿಗುದ್ದಿ, ಮೂರುಗಯ್ಯ ವಸ್ತ್ರದ, ಮಂಜುನಾಥ ಬೂದಿಹಾಳ, ಲಾಲಸಾಬ ಅರಗಂಜಿ ಅಭಿಮಾನಿ ಬಳಗದ ಅಕ್ಷಯ ಗಡೆಕಾರ, ರಾಜೇಸಾಬ ಚಳ್ಳಮರದ, ಮುತ್ತು ಆಲಗುಂಡಿ ಉಪಸ್ಥಿತರಿದ್ದರು.


## ಪಟ್ಟಣ ಪಂಚಾಯತ ಕಾರ್ಯಾಲಯ, ಮುಳಗುಂದ

ಕ್ರಸಂ/ಪ.ಪಂ.ಮು/ಕಂದಾಯ.ವಿಭಾಗ/ವಾ.ಮ.ಶೇ.ಬಾ.ಕು/ವಹಿ- /2024-25 ದಿನಾಂಕ:13/08/2024

ಮಳಿಗೆಗಳ ಬಹಿರಂಗ ಹರಾಜು ಪ್ರಕಟಣೆ ಕರೆ-4

ಈ ಮೂಲಕ ಯಾವತ್ತು ವ್ಯಾಪಾರಸ್ಥರು ಹಾಗೂ ಸಾರ್ವಜನಿಕರಿಗೆ ತಿಳಿಯಪಡಿಸುವದೇನೆಂದರೆ, ಪಟ್ಟಣ ಪಂಚಾಯತ ಮುಳಗುಂದ ವ್ಯಾಪ್ತಿಯಲ್ಲಿ ಬರುವ ವಿವಿಧ ಅನುದಾನದಲ್ಲಿ ನಿರ್ಮಿಸಿದ ಒಟ್ಟು 24 ಮಳಿಗೆಗಳ ಬಹಿರಂಗ ಲೀಲಾವುಮೂಲಕ ನಡೆಸಲು ಸರ್ಕಾರದ ಮಾರ್ಗಸೂಚಿಯಂತೆ ಮಾನ್ಯ ಜಿಲ್ಲಾಧಿಕಾರಿಗಳ ಗದಗ ಇವರು ಬಹಿರಂಗ ಲೀಲಾವು ಮಾಡಲು ಮಂಜೂರ ನೀಡಿದ ಆದೇಶ ಪತ್ರ:ಜಿನಕೋ/ಅಭಿವೃದ್ಧಿ/ಪ.ಪಂ.ಮು/10ನೇ ಹ ಮಳಿಗೆ ಹರಾಜು/ವಹಿ- /2022-23 ದಿನಾಂಕ:20-09-2022ರಂತೆ 12 ವರ್ಷಗಳ ಅವಧಿಗೆ ಮಾಸಿಕ ಬಾಡಿಗೆಯನ್ನು ನಿಗಧಿಪಡಿಸಿದಂತೆ ದಿನಾಂಕ:19-10-2022ರಂದು ನಡೆದ 1ನೇ ಬಹಿರಂಗ ಹರಾಜಿನಲ್ಲಿ ಯಾರು ಭಾಗವಹಿಸದೇ ಇರುವ ಹಿನ್ನಲೆಯಲ್ಲಿ ಹಾಗೂ ಮಾನ್ಯ ಜಿಲ್ಲಾಧಿಕಾರಿಗಳ ಗದಗ ಇವರು ಬಹಿರಂಗ ಲೀಲಾವು ಮಾಡಲು ಮಂಜೂರ ನೀಡಿದ ಆದೇಶ ಪತ್ರ:ಜಿನಕೋ/ಅಭಿವೃದ್ಧಿ/ಪ.ಪಂ.ಮು/10ನೇ ಹ ಮಳಿಗೆ ಹರಾಜು/ವಹಿ- /2022-23 ದಿನಾಂಕ:02-12-2023ರಂತೆ 12 ವರ್ಷಗಳ ಅವಧಿಗೆ ಮಾಸಿಕ ಬಾಡಿಗೆಯನ್ನು ನಿಗಧಿಪಡಿಸಿದಂತೆ ದಿನಾಂಕ:22-12-2023ರಂದು ನಡೆದ 1ನೇ ಬಹಿರಂಗ ಹರಾಜಿನಲ್ಲಿ ಅರ್ಜಿದಾರರುಇ.ಎಮ್.ಡಿ ಹಣ ಭರಣಾ ಮಾಡಲು ನಿರಾಕರಿಸಿ ಹಾಗೂ ಭಾಗವಹಿಸದೆ ಇರುವ ಹಿನ್ನಲೆಯಲ್ಲಿ ಬಹಿರಂಗ ಹರಾಜು ಪ್ರಕಟಣೆ ಕರೆ-2 ಅನ್ನು ದಿನಾಂಕ:08/01/2024ರಂದು ಸೋಮುವಾರ ಮುಂಜಾನೆ 11:00 ಘಂಟೆಗೆ ಪಟ್ಟಣ ಪಂಚಾಯತ ಕಾರ್ಯಾಲಯದ ಮುಂಭಾಗದಲ್ಲಿ ನಡೆದ ಬಹಿರಂಗ ಹರಾಜಿನಲ್ಲಿ ಯಾರು ಭಾಗವಹಿಸದೇ ಇರುವ ಹಿನ್ನಲೆಯಲ್ಲಿ ಪುನ: ದಿನಾಂಕ:20/02/2024ರಂದು ಮಂಗಳವಾರ ಮುಂಜಾನೆ 11:00 ಘಂಟೆಗೆ ಬಹಿರಂಗ ಲೀಲಾವು ಕರೆ-3 ಅನ್ನ ಆಯೋಜಿಸಲಾಗಿದ್ದುಸದರಿ ಬಹಿರಂಗ ಹರಾಜಿನಲ್ಲಿ 24 ಮಳಿಗೆಗಳ ಪೈಕಿ 09 ಮಳಿಗೆಗಳು ಬಿಡ್ ಆಗಿದ್ದು, ಸದರಿ 09 ಮಳಿಗೆಗಳ ಹರಾಜಿಗೆ ಅನುಮೋದನೆ ನೀಡಲು ಮಾನ್ಯ ಜಿಲ್ಲಾಧಿಕಾರಿಗಳಲ್ಲಿ ಪ್ರಸ್ತಾವಣೆ ಸಲ್ಲಿಸಿದ್ದು ಇರುತ್ತದೆ. ಉಳಿದ 15 ಮಳಿಗೆಗಳಿಗೆ ಬಹಿರಂಗ ಹರಾಜಿನಲ್ಲಿ ಅರ್ಜಿದಾರರುಇ.ಎಮ್.ಡಿ ಹಣ ಭರಣಾ ಮಾಡಲು ನಿರಾಕರಿಸಿ ಹಾಗೂ ಭಾಗವಹಿಸದೆ ಇರುವ ಹಿನ್ನಲೆಯಲ್ಲಿ ಈಗ ಬಾಕಿ ಉಳಿದ 15 ಮಳಿಗೆಗಳನ್ನು ಸರ್ಕಾರಿ ಸುತ್ತೋಲೆಯಂತೆ ಮೊದಲನೇ ಪ್ರಕ್ರಿಯೆಯಲ್ಲಿ ನಿಗಧಿಪಡಿಸಿದ ಬಾಡಿಗೆ ಮೊತ್ತದಲ್ಲಿ ಶೇ.25%ರಷ್ಟು ಕಡಿಮೆ ಮಾಡಿ ದಿನಾಂಕ:30/08/2024ರಂದು ಶುಕ್ರವಾರ ಮುಂಜಾನೆ 11:00 ಘಂಟೆಗೆ ಬಹಿರಂಗ ಲೀಲಾವು ಕರೆ-4 ಪಟ್ಟಣ ಪಂಚಾಯತಿ ಕಾರ್ಯಾಲಯದ ಮುಂಭಾಗದಲ್ಲಿ ನಡೆಸಲು ಈ ಕೆಳಗಿನ ನಿರ್ದೇಶನ ಪಾಲಿಸಲು ಕೋರಿದೆ.

| | |
|---|---|
| ನಿಗಧಿತ ಅರ್ಜಿಯನ್ನು ಪಡೆಯುವದು ಸಾರ್ವಜನಿಕರ ಪ್ರಕಟಣೆ ಪ್ರಚುರಪಡಿಸಿದ ದಿನಾಂಕ ದಿಂದ ದಿನಾಂಕ:27/08/2024ರ ವರೆಗೆ. | ದಿನಾಂಕ:13/08/2024 ದಿಂದ ದಿನಾಂಕ:27/08/2024ರ ಸಂಜೆ 05:30 ಘಂಟೆಯವರೆಗೆ ಮಾತ್ರ ಅರ್ಜಿ ಕೊಡುವುದು. |
| ಅರ್ಜಿ ಶುಲ್ಕ | ಸಾಮಾನ್ಯ ಅರ್ಜಿ ಶುಲ್ಕ ರೂ.100/- ವಿಕಲಚೇತನರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಅರ್ಜಿ ಶುಲ್ಕ ರೂ.50/- |
| ಭರ್ತಿ ಮಾಡಿದ ಅರ್ಜಿಗಳನ್ನು ಸ್ವೀಕರಿಸುವ ಕೊನೆಯ ದಿನಾಂಕ: | ದಿನಾಂಕ:28/08/2024 ರ ಸಂಜೆ 05:30 ಘಂಟೆಯವರೆಗೆ |
| ಬಹಿರಂಗ ಹರಾಜು ಮಾಡುವ ದಿನಾಂಕ: | ದಿನಾಂಕ:30/08/2024 ರ ಬೆಳಿಗ್ಗೆ 11:00 ಘಂಟೆಗೆ. |
| ಬಹಿರಂಗ ಹರಾಜು ಮಾಡುವ ಸ್ಥಳ ಸಮಯ ದಿನಾಂಕ: | ಪಟ್ಟಣ ಪಂಚಾಯತಿ ಕಾರ್ಯಾಲಯದ ಮುಂಭಾಗದಲ್ಲಿ ದಿನಾಂಕ:30/08/2024 ರಂದು ಶುಕ್ರವಾರ ಬೆಳಿಗ್ಗೆ 11:00 ಘಂಟೆಗೆ. |

10ನೇ ಹಣಕಾಸು ಯೋಜನೆಯಡಿ ನಿರ್ಮಿಸಿದ ವಾಣಿಜ್ಯ ಮಳಿಗೆ ನಂ.01 ರಿಂದ 13ರ ಮಳಿಗೆಗಳ ಬಹಿರಂಗ ಹರಾಜು ಕರೆ-4.

| ಅ. ನಂ | ಮಳಿಗೆ ನಂ | ಮಳಿಗೆ ಅಳತೆ (ಚ.ಅಡಿ) | ಮೀಸಲಾತಿ ವಿವರ | ಬಹಿರಂಗ ಲೀಲಾವು ಕರೆ-1ರಲ್ಲಿ ನಿಗಧಿಪಡಿಸಿದ ಮಾಸಿಕ ರಕಂ | ಸುತ್ತೋಲೆಯಂತೆ ಈಗ ಶೇ.25% ಕಡಿಮೆ ಮಾಡಿ ನಿಗಧಿಪಡಿಸಿದ ಮಾಸಿಕ ಬಾಡಿಗೆ ರಕಂ | ಲೀಲಾವಿನಲ್ಲಿ ಭಾಗವಹಿಸುವವರು ತುಂಬಬೇಕಾದ ಇ.ಎಂ.ಡಿ ಹಣ | ಯಶಸ್ವಿ ಬಿಡ್ಡದಾರರ ಪಾವತಿಸುವ ಠೇವಣಿ ರಕಂ | ಷರಾ |
|---|---|---|---|---|---|---|---|---|
| 1 | 1 | 264 | ಸಾಮಾನ್ಯ | 10617.00 | 7962.75 | 10000.00 | 53623.00 | ಬಹಿರಂಗ ಹರಾಜು |
| 2 | 2 | 252 | ಸಾಮಾನ್ಯ | 10638.00 | 7978.50 | 10000.00 | 51185.00 | ಬಹಿರಂಗ ಹರಾಜು |
| 3 | 3 | 228 | ಸಾಮಾನ್ಯ | 10681.00 | 8010.75 | 10000.00 | 46310.00 | ಬಹಿರಂಗ ಹರಾಜು |
| 4 | 4 | 199.5 | ಸಾಮಾನ್ಯ | 10732.00 | 8049.00 | 10000.00 | 40521.00 | ಬಹಿರಂಗ ಹರಾಜು |
| 5 | 5 | 190 | ಪರಿಶಿಷ್ಟ ಜಾತಿ | 10802.00 | 8101.50 | 10000.00 | 38592.00 | ಬಹಿರಂಗ ಹರಾಜು |
| 6 | 6 | 190 | ಪರಿಶಿಷ್ಟ ಜಾತಿ | 10802.00 | 8101.50 | 10000.00 | 38592.00 | ಬಹಿರಂಗ ಹರಾಜು |
| 7 | 7 | 190 | ಪರಿಶಿಷ್ಟ ಜಾತಿ | 10802.00 | 8101.50 | 10000.00 | 38592.00 | ಬಹಿರಂಗ ಹರಾಜು |
| 8 | 8 | 190 | ಪರಿಶಿಷ್ಟ ಪಂಗಡ | 10802.00 | 8101.50 | 10000.00 | 38592.00 | ಬಹಿರಂಗ ಹರಾಜು |
| 9 | 9 | 164 | ಸಾಮಾನ್ಯ | 10795.00 | 8096.25 | 10000.00 | 33311.00 | ಬಹಿರಂಗ ಹರಾಜು |
| 10 | 10 | 160 | ಸಾಮಾನ್ಯ | 10802.00 | 8101.50 | 10000.00 | 32498.00 | ಬಹಿರಂಗ ಹರಾಜು |
| 11 | 11 | 164 | ಸಾಮಾನ್ಯ | 10795.00 | 8096.25 | 10000.00 | 33311.00 | ಬಹಿರಂಗ ಹರಾಜು |
| 12 | 12 | 168 | ಸಾಮಾನ್ಯ | 10788.00 | 8091.00 | 10000.00 | 34123.00 | ಬಹಿರಂಗ ಹರಾಜು |
| 13 | 13 | 161.5 | ಸಾಮಾನ್ಯ | 10800.00 | 8100.00 | 10000.00 | 32803.00 | ಬಹಿರಂಗ ಹರಾಜು |

10ನೇ ಹಣಕಾಸು ಯೋಜನೆಯಡಿ ವಾರ್ಡ ನಂ.5 ಬಜಾರದಲ್ಲಿ ನಿರ್ಮಿಸಿದ ವಾಣಿಜ್ಯ ಮಳಿಗೆ ನಂ.06 ಮತ್ತು 07ಮಳಿಗೆಗಳ ಬಹಿರಂಗ ಹರಾಜು ಕರೆ-4.

| ಅ. ನಂ | ಮಳಿಗೆ ನಂ | ಮಳಿಗೆ ಅಳತೆ (ಚ.ಅಡಿ) | ಮೀಸಲಾತಿ ವಿವರ | ಬಹಿರಂಗ ಲೀಲಾವು ಕರೆ-1ರಲ್ಲಿ ನಿಗಧಿಪಡಿಸಿದ ಮಾಸಿಕ ರಕಂ | ಸುತ್ತೋಲೆಯಂತೆ ಈಗ ಶೇ.25% ಕಡಿಮೆ ಮಾಡಿ ನಿಗಧಿಪಡಿಸಿದ ಮಾಸಿಕ ಬಾಡಿಗೆ ರಕಂ | ಲೀಲಾವಿನಲ್ಲಿ ಭಾಗವಹಿಸುವವರು ತುಂಬಬೇಕಾದ ಇ.ಎಂ.ಡಿ ಹಣ | ಯಶಸ್ವಿ ಬಿಡ್ಡದಾರರ ಪಾವತಿಸುವ ಠೇವಣಿ ರಕಂ | ಷರಾ |
|---|---|---|---|---|---|---|---|---|
| 1 | 6 | 70 | ಪರಿಶಿಷ್ಟ ಪಂಗಡ | 2019.00 | 1514.25 | 5000.00 | 25000.00 | ಬಹಿರಂಗ ಹರಾಜು |
| 2 | 7 | 120 | ಸಾಮಾನ್ಯ | 2844.00 | 2133.00 | 5000.00 | 75000.00 | ಬಹಿರಂಗ ಹರಾಜು |

ವಿಶೇಷ ಸೂಚನೆ: ಹರಾಜಿನ ಷರತ್ತು ಹಾಗೂ ನಿಂಬಧನೆಗಳ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಕಛೇರಿಯ ಅವಧಿಯಲ್ಲಿ ಕಂದಾಯ ವಿಭಾಗಕ್ಕೆ ಸಂಪರ್ಕಿಸಿ ಪಡೆಯಬಹುದಾಗಿದೆ.

ಸಹಿ/- (ಮಂಜುನಾಥ ಪಿ ಗುಳೇದ)
ಮುಖ್ಯಾಧಿಕಾರಿ
ಪಟ್ಟಣ ಪಂಚಾಯತ ಮುಳಗುಂದ

ಸಹಿ/- (ಶ್ರೀನಿವಾಸಮೂರ್ತಿ ಕುಲಕರ್ಣಿ)
ಆಡಳಿತಾಧಿಕಾರಿಗಳು ಹಾಗೂ ತಹಶೀಲ್ದಾರ ತಾಲೂಕಾ
ಕಾರ್ಯನಿರ್ವಾಹಕ ದಂಡಾಧಿಕಾರಿಗಳು, ಗದಗ

ವಾ.ಸಾ.ಇ/ಗದಗ/156/ದೇಶಪಾಂಡೆಪಬ್ಲಿಸಿಟಿ/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka